ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

ಥಾಯ್ಲೆಂಡ್‌ನ ಬ್ಯಾಡ್ಮಿಂಟನ್ ಆಟಗಾರ್ತಿ ಪಿಚಮೊನ್ ಒಪಟ್ನಿಪುತ್ ಅವರು ಉದ್ದೀಪನ ಮದ್ದು ಸೇವಿಸಿರುವುದು ದೃಢಪಟ್ಟಿದೆ. ಇದು, ಹಾಲಿ ಏಷ್ಯನ್ ಕ್ರೀಡಾಕೂಟದಲ್ಲಿ ಪತ್ತೆಯಾದ ಮೊದಲ ಡೋಪಿಂಗ್ ಪ್ರಕರಣವಾಗಿದೆ.




23 ಸೆಪ್ಟೆಂಬರ್, 2026 ಬುಧವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ -192 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಇಲ್ಲಿ ವಿಶ್ವ ಸುಂದರಿಗಿರುವ ಅದೃಷ್ಟ ಮಿ.ಯೂನಿವರ್ಸ್‌ಗಿಲ್ಲ » 2



ಅನಂತನಾಗ್‌ಗೆ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನ » 3



ಜೆಡಿಎಸ್ ರಾಜ್ಯ ಘಟಕಕ್ಕೆ ಚ.ರಾ.ಪಟ್ಟಣದ ಮೂವರ ಆಯ್ಕೆ » 4

# ಕಸ್ತೂರಿ ರಂಗನ್ ವರದಿ ಮಾರ್ಪಾಡು: ನಿರ್ಣಯ

- ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಸಮಿತಿ
- ಉಭಯ ಸದನಗಳಲ್ಲಿ ಸರ್ವಾನುಮತದ ಒಪ್ಪಿಗೆ

• ಪ್ರಜೋದಯ ವರದಿ

**ಬೆಂಗಳೂರು:** ಕಸ್ತೂರಿ ರಂಗನ್ ವರದಿ ನ್ಯೂನತೆ ಪರಿಶೀಲಿಸಿ, ಅಗತ್ಯ ತಿದ್ದುಪಡಿ ಸೂಚಿಸಲು ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚನೆ, ಕೇಂದ್ರಕ್ಕೆ ಸರ್ವ ಪಕ್ಷ ನಿಯೋಗ, ಗ್ರಾಮವಾರು ಸಮೀಕ್ಷೆ ನಡೆಸಿ ಮಾರ್ಪಾಡುಗೊಳಿಸಲು ಒಂದು ವರ್ಷ ಕಾಲಾವಕಾಶ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸುವ ಕುರಿತು ವಿಧಾನ ಮಂಡಲದ ಉಭಯ ಸದನಗಳಲ್ಲಿ ಮಂಗಳವಾರ ಸರ್ವಾನುಮತದ ನಿರ್ಣಯ ಅಂಗೀಕರಿಸಲಾಯಿತು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಧಾನಸಭೆ ಹಾಗು ವಿಧಾನ ಪರಿಷತ್ತಿನಲ್ಲಿ ಕಸ್ತೂರಿ ರಂಗನ್ ವರದಿ ಆಧರಿತ ಕರಡು ಅಧಿಸೂಚನೆ ಕುರಿತು ನಡೆದ ಚರ್ಚೆಗೆ ಉತ್ತರಿಸಿ, ನಿರ್ಣಯಗಳನ್ನು ಮಂಡಿಸಿದರು. ಅದಕ್ಕೆ ಉಭಯ ಸದನಗಳು ಒಪ್ಪಿಗೆ ನೀಡಿದವು.

**ಉನ್ನತ ಮಟ್ಟದ ಸಮಿತಿ**

ಕಸ್ತೂರಿ ರಂಗನ್ ವರದಿ ಕುರಿತ ಕೇಂದ್ರ ಸರ್ಕಾರದ ಏಳನೇ ಕರಡು ಅಧಿಸೂಚನೆಯನ್ನು ಪ್ರಸ್ತುತ ಯಥಾಸ್ಥಿತಿಯಲ್ಲಿ ಒಪ್ಪಿಕೊಳ್ಳಲು ಸಾಧ್ಯವಿಲ್ಲ. ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.



## ಅರಣ್ಯ ಹಕ್ಕು ಕಾಯ್ದೆ ಅನುಷ್ಠಾನಕ್ಕೆ ಸಭೆ

ಬಗರ್ ಹುಕುಂ, ಅರಣ್ಯ ಹಕ್ಕು ಕಾಯ್ದೆ, ಡೀಮ್ಡ್ ಫಾರೆಸ್ಟ್, ಭೂಮಂಜೂರಾತಿ, ಮೇಲ್ಮನವಿ ಹಾಗು ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಪರಿಶೀಲಿಸದೆ ಸ್ಥಳೀಯರ ವಿರುದ್ಧ ಕ್ರಮ ಕೈಗೊಳ್ಳಬಾರದು. ಅರಣ್ಯ ಹಕ್ಕುಗಳ ಕಾಯ್ದೆ ಅನುಷ್ಠಾನದ ಕುರಿತು ತಕ್ಷಣವೇ ಸಭೆ ನಡೆಸಲಾಗುವುದು. ಗೋಮಾಳವಿದ್ದರೆ ಮಂಜೂರು ಮಾಡುವುದಿಲ್ಲವೆಂಬ ವಿಚಾರಕ್ಕೆ ಸಂಬಂಧಿಸಿ ದಂತೆ ನ್ಯಾಯಾಂಗ ಪ್ರಕರಣಗಳನ್ನು ಪರಿಗಣಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

## ಪಕ್ಷಭೇದ ಮರೆತು ಧ್ವನಿ ಎತ್ತಬೇಕು

ಕೇಂದ್ರಕ್ಕೆ ಸರ್ವಪಕ್ಷ ನಿಯೋಗ ಕೊಂಡೊಯ್ಯಲು, ಪ್ರಧಾನಿ ಹಾಗು ಕೇಂದ್ರ ಸಚಿವರನ್ನು ಭೇಟಿಯಾಗಲು ಮತ್ತು ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲರನ್ನು ನೇಮಿಸಲು ಸಲಹೆಗಳು ಮೂಡಿದೆ. ಕೇಂದ್ರ ಸರ್ಕಾರದ ಮಟ್ಟದಲ್ಲಿ ರಾಜ್ಯದ ನಿಲುವನ್ನು ಸಮರ್ಥವಾಗಿ ಮಂಡಿಸಲು ಕರ್ನಾಟಕದ ಎಲ್ಲಾ ಸಂಸದರು ಪಕ್ಷಭೇದ ಮರೆತು ಒಗ್ಗಟ್ಟಿನಿಂದ ಧ್ವನಿ ಎತ್ತಬೇಕು ಎಂದು ಡಿ.ಕೆ. ಶಿವಕುಮಾರ್ ಮನವಿ ಮಾಡಿದರು.

ಈ ಸಮಿತಿಯು ಭೌತಿಕ ಸಮೀಕ್ಷೆ ನಡೆಸಿ ಪರಿಸರ ಸೂಕ್ಷ್ಮ ಪ್ರದೇಶ, ಅರಣ್ಯ, ಕೃಷಿ, ತೋಟಗಾರಿಕೆ ಹಾಗು ಜನವಸತಿ ಪ್ರದೇಶಗಳನ್ನು ವೈಜ್ಞಾನಿಕವಾಗಿ ಪ್ರತ್ಯೇಕಿಸುವ ಕುರಿತು ಶಿಫಾರಸ್ಸು ಮಾಡಲಿದೆ. ಅದರೊಂದಿಗೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಸಮಿತಿಗಳನ್ನು ರಚಿಸಲು ನಿರ್ಣಯಿಸಲಾಗಿದೆ. ಈ ಸಮಿತಿಯಲ್ಲಿ ಕಂದಾಯ ಮತ್ತು ಅರಣ್ಯ ಇಲಾಖೆಯ ಅಧಿಕಾರಿಗಳು, ರೈತ ಮುಖಂಡರು, ಕೈಗಾರಿಕೆ ಮತ್ತು ಉದ್ಯಮ ಕ್ಷೇತ್ರದ ಪ್ರತಿನಿಧಿಗಳು, ಅರಣ್ಯ,ಪರಿಸರ ತಜ್ಞರು, ಶೈಕ್ಷಣಿಕ ಸಂಸ್ಥೆಗಳ ಪರಿಣಿತರು ಇರಲಿದ್ದಾರೆಂದು ಮುಖ್ಯಮಂತ್ರಿ ತಿಳಿಸಿದರು.

ಉಪಗ್ರಹ ಆಧಾರಿತ ಚಿತ್ರಗಳಲ್ಲಿ ಅರಣ್ಯ ಮತ್ತು ಕೃಷಿ-ತೋಟಗಾರಿಕೆ ಪ್ರದೇಶಗಳು ಒಂದೇ ರೀತಿ ಹಸಿರಾಗಿ ಕಾಣುವುದರಿಂದ ಈ ಗೊಂದಲ ಸೃಷ್ಟಿಯಾಗಿದೆ. ಒಂದು ಗ್ರಾಮದ ಐದನೇ ಒಂದು ಭಾಗ (ಶೇ.20) ಅರಣ್ಯ ಪ್ರದೇಶದಲ್ಲಿದೆ ಎಂಬ ಕಾರಣಕ್ಕೆ ಇಡೀ ಗ್ರಾಮವನ್ನೇ ಪರಿಸರ ಸೂಕ್ಷ್ಮ ಪ್ರದೇಶವೆಂದು ಘೋಷಿಸುವುದು ವೈಜ್ಞಾನಿಕ ಕ್ರಮವಲ್ಲ. ಅದರಿಂದ ಮನೆ ನಿರ್ಮಾಣ, ಆಸ್ತಿ ವಾರಸುದಾರಿಕೆ, ಕೃಷಿ, ಪ್ಲಾಂಟೇಶನ್, ರಸ್ತೆ, ಶಾಲೆ, ಆಸ್ಪತ್ರೆ ಮತ್ತು ಕುಡಿಯುವ ನೀರಿನ ಪೈಪ್‌ಲೈನ್‌ನಂತಹ ಮೂಲ ಸೌಕರ್ಯಗಳಿಗೆ ಅನಗತ್ಯ ತೊಂದರೆ ಉಂಟಾಗಿ ಸ್ಥಳೀಯರಲ್ಲಿ ಆತಂಕ ಮೂಡಿದೆ ಎಂದು ವಿವರಿಸಿದರು.

ಸರ್ವೆ ನಂಬರ್ ಪ್ರಕಾರ ಸಮೀಕ್ಷೆ

ಈ ನ್ಯೂನತೆಗಳನ್ನು ನಿವಾರಿಸಲು ಭೌತಿಕವಾಗಿ ಗ್ರಾಮವಾರು ಮತ್ತು ಸರ್ವೆ ಸಂಖ್ಯೆವಾರು ಸಮೀಕ್ಷೆ ನಡೆಸಿ, ಪ್ರತಿಯೊಂದು ಗ್ರಾಮದ ಮನೆ, ಶಾಲೆ, ತೋಟಗಾರಿಕೆ, ಕುಡಿಯುವ ನೀರು ಮತ್ತು ವಿದ್ಯುತ್ ಕಂಬಗಳ ನಕ್ಷೆ ತಯಾರಿಸಿ ರಕ್ಷಣೆ ಮಾಡಬೇಕಿದೆ. ಈ ಸಮೀಕ್ಷೆ ನಡೆಸಿ ನಕ್ಷೆ ಸಿದ್ಧಪಡಿಸಲು ಮತ್ತು ಮಾರ್ಪಾಡುಗಳನ್ನು ಸೂಚಿಸಲು ಒಂದು ವರ್ಷದ ಕಾಲಾವಕಾಶ ನೀಡುವಂತೆ ಹಾಗು ಕರಡು ಅಧಿಸೂಚನೆಯನ್ನು ಅಂತಿಮಗೊಳಿಸದೇ ವಿವರವಾದ ಚರ್ಚೆ ನಡೆಸುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗುವುದೆಂದು ತಿಳಿಸಿದರು.

## ಇಂದು ಪೌರಕಾರ್ಮಿಕರ ದಿನಾಚರಣೆ

• ಪ್ರಜೋದಯ ವರದಿ

**ಹಾಸನ :** ಪೌರಕಾರ್ಮಿಕರ ದಿನಾಚರಣೆಯನ್ನು ಸೆ.23 ರಂದು ಬೆಳಿಗ್ಗೆ 11 ಗಂಟೆಗೆ ಮಹಾನಗರ ಪಾಲಿಕೆ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ ಶಿವಲಿಂಗೇಗೌಡ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ, ಶಾಸಕ ಹೆಚ್.ಪಿ.ಸ್ವರೂಪ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಡಾ|| ಸೂರಜ್ ರೇವಣ್ಣ, ಆದಿಜಾಂಭವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್ ಮಂಜುನಾಥ್, ಮಹಾನಗರ ಪಾಲಿಕೆಯ ಆಡಳಿತಾಧಿಕಾರಿ ನಿತೇಶ್ ಪಾಟೀಲ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶುಭಾನ್ವಿತಾ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರುದ್ರಮುನಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಅಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು.

# ಬರಪೀಡಿತ ಪಟ್ಟಿಗೆ ಮತ್ತೆ 53 ತಾಲ್ಲೂಕು ಸೇರ್ಪಡೆ

• ಪ್ರಜೋದಯ ವರದಿ



**ಬೆಂಗಳೂರು:** ರಾಜ್ಯ ಸರ್ಕಾರವು 3ನೇ ಹಂತದಲ್ಲಿ ಮತ್ತಷ್ಟು ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡಿ ಆದೇಶ ಹೊರಡಿಸಿದೆ. ಬರಪೀಡಿತ ತಾಲ್ಲೂಕುಗಳ ಸಂಖ್ಯೆ 177ಕ್ಕೆ ಏರಿಕೆ ಆಗಿದೆ.

ಮೊದಲ ಹಂತದಲ್ಲಿ 101 ಹಾಗು 2ನೇ ಹಂತದಲ್ಲಿ 23 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದ್ದೆವು. ಇದೀಗ ಮತ್ತೆ 53 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಸರ್ಕಾರ ನಿರ್ಧಾರ ಮಾಡಿದೆ. ರಾಜ್ಯದಲ್ಲಿ ಮುಂಗಾರು ಮಳೆ ಕೊರತೆಯಿಂದ ಉಂಟಾಗಿರುವ ಬರ ಪರಿಸ್ಥಿತಿಯನ್ನು ನಿರಂತರವಾಗಿ ವೈಜ್ಞಾನಿಕವಾಗಿ ಮೌಲ್ಯಮಾಪನ ನಡೆಸಲಾಗುತ್ತಿದ್ದು, ರೈತರ ಸಂಕಷ್ಟಕ್ಕೆ ತ್ವರಿತವಾಗಿ ಸ್ಪಂದಿಸುವ ನಿಟ್ಟಿನಲ್ಲಿ ಹಂತ ಹಂತವಾಗಿ ಕ್ರಮ ಕೈಗೊಳ್ಳುತ್ತಿದ್ದೇವೆಂದು ಕಂದಾಯ ಸಚಿವ ಡಾ.ಜಿ. ಪರಮೇಶ್ವರ್ ಅವರು ತಿಳಿಸಿದ್ದಾರೆ.

53 ತಾಲ್ಲೂಕುಗಳ ಪೈಕಿ 51 ತೀವ್ರ ಹಾಗು 2 ತಾಲ್ಲೂಕು ಸಾಧಾರಣ ಬರಪೀಡಿತವಾಗಿದ್ದು, ಅದರೊಂದಿಗೆ ರಾಜ್ಯದಲ್ಲಿ ಬರಪೀಡಿತ ಎಂದು ಘೋಷಿಸಲಾದ ತಾಲ್ಲೂಕುಗಳ ಸಂಖ್ಯೆ 177ಕ್ಕೆ ಏರಿಕೆಯಾಗಿದೆ. ಜೊತೆಗೆ ಮಳೆ ಪ್ರಮಾಣ, ಮಣ್ಣಿನ ತೇವಾಂಶ, ಬೆಳೆ ಸ್ಥಿತಿ ಸೇರಿ ವಿವಿಧ ವೈಜ್ಞಾನಿಕ ಮಾನದಂಡಗಳ ಆಧಾರದ ಮೇಲೆ 4ನೇ ಹಂತದಲ್ಲಿ 7 ಜಿಲ್ಲೆಗಳ 11 ತಾಲ್ಲೂಕುಗಳ ಅಧ್ಯಯನಕ್ಕೆ ಅರ್ಹತೆ ಪಡೆದಿವೆ. ವೈಜ್ಞಾನಿಕ ಪರಿಶೀಲನೆ, ಪಾರದರ್ಶಕ ಸಮೀಕ್ಷೆ ಮತ್ತು ನಿಖರ ವರದಿಯ ಆಧಾರದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಮುಂಗಾರು ಹಂಗಾಮು ಮುಗಿಯುವವರೆಗೂ ಬರ ಪರಿಸ್ಥಿತಿಯ ಮೇಲ್ವಿಚಾರಣೆ ಮುಂದುವರಿಯಲಿದ್ದು, ಅಗತ್ಯ ಕಂಡು ಬಂದಲ್ಲಿ ಮುಂದಿನ ಹಂತದಲ್ಲಿಯೂ ಹೆಚ್ಚುವರಿ ತಾಲ್ಲೂಕುಗಳನ್ನು ಗ್ರೌಂಡ್ ಟ್ರೂಥಿಂಗ್‌ಗೆ ಸೇರಿಸಲಾಗುವುದು. ಬೆಳೆ ಹಾನಿಯ ನೈಜ ಚಿತ್ರಣ ಆಧರಿಸಿ ಬರದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ನಿಯಮಾನುಸಾರ ಅಗತ್ಯ ನೆರವು ತಲುಪಿಸಲು ನಾವು ಬದ್ಧರಿದ್ದೇವೆಂದು ಮಾಹಿತಿ ನೀಡಿದ್ದಾರೆ.

# ಅ.3ಕ್ಕೆ ಪೆಂಡಾಲ್ ಗಣಪತಿ ವಿಸರ್ಜನಾ ಮಹೋತ್ಸವ

• ಪ್ರಜೋದಯ ವರದಿ

**ಹಾಸನ:** ನಗರ ಸಾರಿಗೆ ಬಸ್ ನಿಲ್ದಾಣ ಸಮೀಪ ಪ್ರತಿಷ್ಠಾಪಿಸಿರುವ ಪೆಂಡಾಲ್ ಗಣಪತಿಯನ್ನು ಅ.3ರಂದು ಅದ್ದೂರಿಯಾಗಿ ವಿಸರ್ಜಿಸಲಾಗುವುದೆಂದು ಗಣಪತಿ ಸೇವಾ ಸಮಿತಿ ಅಧ್ಯಕ್ಷ ಡಾ|| ನಾಗರಾಜ್ ಅವರು ಹೇಳಿದರು.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 72ನೇ ಗಣೇಶೋತ್ಸವ ಇದಾಗಿದೆ. ನಿತ್ಯ 3 ಸಾವಿರ ಜನರಿಗೆ ಪ್ರಸಾದ ವಿನಿಯೋಗ ಮಾಡಲಾಗುತ್ತಿದೆ. ಪ್ರತಿದಿನ ಭಾವಗೀತೆ, ಸುಗಮ ಸಂಗೀತ, ಭಕ್ತಿ ಗೀತೆ ಗಾಯನ, ಶಾಸ್ತ್ರೀಯ ಸಂಗೀತ ಸಮಾರಂಭಗಳು ನಡೆಯುತ್ತಿವೆ. ಅ.3ರ ಬೆಳಿಗ್ಗೆಯಿಂದ ರಾತ್ರಿ ವರೆಗೆ ನಗರದಾದ್ಯಂತ ಸುಮಾರು 6 ಕಿ.ಮೀ. ವ್ಯಾಪ್ತಿಯಲ್ಲಿ ಅದ್ದೂರಿ ಮೆರವಣಿಗೆ ನಡೆಸಲಾಗುವುದು. ಡೊಳ್ಳು ಕುಣಿತ, ಹುಲಿ ವೇಷ, ಕಂಸಾಳೆ, ಕೀಲು ಕುದುರೆ ಸೇರಿ 40ಕ್ಕೂ ಹೆಚ್ಚು ಕಲಾ ತಂಡಗಳು ಪಾಲ್ಗೊಳ್ಳಲಿವೆ. ಅಂದು ಸಂಜೆ 7.30ಕ್ಕೆ ದೇವಿಗೆರೆಯಲ್ಲಿ 30 ಅಡಿ ಎತ್ತರದ ಗಣಪತಿ ಮೂರ್ತಿಯನ್ನು ಧಾರ್ಮಿಕ ಪೂಜಾ ಕೈಂಕರ್ಯದ ಬಳಿಕ ವಿಸರ್ಜಿಸಲಾಗುತ್ತದ. ವಿಸರ್ಜನಾ ಕಾರ್ಯಕ್ರಮದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ, ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ, ಶಾಸಕ ಹೆಚ್.ಪಿ.ಸ್ವರೂಪ್ ಸೇರಿ ಅನೇಕರು ಪಾಲ್ಗೊಳ್ಳಲಿದ್ದಾರೆಂದರು.



**ಸೆ.25-26ಕ್ಕೆ ವಿವಿಧ ಸ್ಪರ್ಧೆ**

ಗಣೇಶೋತ್ಸವ ಅಂಗವಾಗಿ ಸೆ.25ರಂದು ಮಹಿಳೆಯರು ಮತ್ತು ಪುರುಷರಿಗೆ ಸಾಂಸ್ಕೃತಿಕ ಸ್ಪರ್ಧೆ ಏರ್ಪಡಿಸಲಾಗಿದೆ. ಸೆ.26ರಂದು ಮಹಾರಾಜ ಪಾರ್ಕ್‌ನಲ್ಲಿ ವಿವಿಧ ಕ್ರೀಡಾ ಸ್ಪರ್ಧೆ ನಡೆ ಯಲಿದ್ದು ವಿಜೇತರಿಗೆ ಬಹುಮಾನ ವಿತರಿಸಲಾಗುವುದು. ಸೆ.29ರಂದು ಜಾನಪದ ಗಾಯಕಿ ಸವಿತಕ್ಕ ಅವರು ಕಾರ್ಯಕ್ರಮ ನಡೆಸಿಕೊಡಲಿದ್ದಾರೆಂದರು.

ಮಂಗಳವಾರದ ಪ್ರಸಾದ ಸೇವೆಯನ್ನು ಸಿಟಿ ಕೋ ಆಪರೇಟಿವ್ ಬ್ಯಾಂಕ್ ಹಾಗು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ವಹಿಸಿಕೊಂಡಿತ್ತು. ಗಣಪತಿ ಸೇವಾ ಸಮಿತಿ ಕಾರ್ಯದರ್ಶಿ ಚನ್ನವೀರಪ್ಪ ಮಾತನಾಡಿದರು. ಧರ್ಮದರ್ಶಿ ಕೆಪಿಎಸ್ ಪ್ರಮೋದ್, ಕಮಲ್‌ಕುಮಾರ್, ಸುರೇಶ್‌ಕುಮಾರ್, ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಹೆಚ್.ಬಿ. ಮದನಗೌಡ ಹಲವರಿದ್ದರು.

# ಲಂಚಕ್ಕೆ ಪ್ರೇರಣೆ: ಶಿವಲಿಂಗೇಗೌಡ ರಾಜೀನಾಮೆಗೆ ಆಗ್ರಹ

## ಬಿಜೆಪಿ ಮುಖಂಡ ಜಿವಿಟಿ ಬಸವರಾಜು ಒತ್ತಾಯ

• ಪ್ರಜೋದಯ ವರದಿ

**ಹಾಸನ :** ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ಲಂಚ ನೀಡಲು ಪ್ರೇರಣೆ ನೀಡುವ ರೀತಿ ಹೇಳಿಕೆ ನೀಡಿ, ಈಗ ಸಮರ್ಥನೆ ಮಾಡಿಕೊಳ್ಳುತ್ತಿರುವುದನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಮುಖ್ಯಮಂತ್ರಿ ಆಶಯಕ್ಕೆ ವಿರುದ್ಧವಾಗಿರುವ ಅಬಕಾರಿ ಸಚಿವರು ನೈತಿಕ ಹೊಣೆ ಹೊತ್ತು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಬಿಜೆಪಿ ಮುಖಂಡ ಜಿವಿಟಿ ಬಸವರಾಜು ಅವರು ಒತ್ತಾಯಿಸಿದರು.




ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭ್ರಷ್ಟಾಚಾರ ರಹಿತ ಆಡಳಿತದ ವಾಗ್ದಾನ ಮಾಡಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಂಪುಟದ ಸಚಿವರಾದ ಕೆ.ಎಂ.ಶಿವಲಿಂಗೇಗೌಡ ಅವರು ಸರ್ಕಾರಿ ಕೆಲಸ ಮಾಡಿಸಿಕೊಳ್ಳಲು ಹಣ ನೀಡುವುದು ಧರ್ಮ ಎಂದಿರುವುದು ಮುಖ್ಯ ಮಂತ್ರಿ ಆಶಯಕ್ಕೆ ವಿರುದ್ಧವಾಗಿದೆ ಎಂದು ಹೇಳಿದರು.

ಯಾವುದೇ ಸರ್ಕಾರಿ ಅಧಿಕಾರಿ ಅಥವಾ ನೌಕರ ಲಂಚ ಕೇಳಿದರೆ ತಮ್ಮ ಗಮನಕ್ಕೆ ತರುವಂತೆ ಮುಖ್ಯಮಂತ್ರಿ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಆದರೆ, ಜಿಲ್ಲಾ ಉಸ್ತುವಾರಿ ಸಚಿವ ಶಿವಲಿಂಗೇಗೌಡ ಅವರು ಇತ್ತೀಚೆಗೆ ಸಕಲೇಶಪುರದಲ್ಲಿ ನಡೆದ ಪ್ರಜಾಸೇವಾ ಆಂದೋಲನ ಸಭೆಯಲ್ಲಿ ಅಧಿಕಾರಿಯೊಬ್ಬರು ವ್ಯಕ್ತಿಯಿಂದ 2 ಲ.ರೂ. ಲಂಚ ಪಡೆದಿರುವ ಆರೋಪ ಕೇಳಿ ಬಂದಾಗ, ಜಿಲ್ಲಾಧಿಕಾರಿ ಸಮ್ಮುಖದಲ್ಲೇ ಗೌರವದಿಂದ ನೀಡುವುದು ಧರ್ಮವೆಂದು ಹೇಳಿರುವುದು ಖಂಡನೀಯ ಎಂದರು.

ಸಚಿವರ ಹೇಳಿಕೆ ಲಂಚದ ವ್ಯವಸ್ಥೆ ಸಮರ್ಥಿಸುವಂತಿದೆ. ನಂತರವೂ ಸಚಿವರು ನೀಡುತ್ತಿರುವ ಸಮರ್ಥನೆ ಹಾಸ್ಯಾಸ್ಪದ, ಸಚಿವರೊಬ್ಬರು ಈ ರೀತಿ ಹೇಳಿಕೆ ನೀಡಿರುವುದು ದೇಶದಲ್ಲೇ ಮೊದಲು. ಅರಸೀಕೆರೆ ತಾಲ್ಲೂಕಿನಲ್ಲಿ ತಮ್ಮ ರಾಜಕೀಯ ಪ್ರಭಾವಕ್ಕೆ ಅನುಗುಣವಾಗಿ ಅಧಿಕಾರಿಗಳನ್ನು ನೇಮಿಸಿಕೊಂಡು, ಅವರ ಮೂಲಕ ಭ್ರಷ್ಟಾಚಾರಕ್ಕೆ ಅವಕಾಶ ಕಲ್ಪಿಸಿದ್ದಾರೆ. ಇದೀಗ ಜಿಲ್ಲೆ ಮತ್ತು ರಾಜ್ಯಾದ್ಯಂತ ವಿಸ್ತರಣೆ ಮಾಡಲು ಮುಂದಾಗಿದ್ದಾರೆ. ಭ್ರಷ್ಟಾಚಾರ ಆರೋಪ ಎದುರಿಸುತ್ತಿರುವ ಅಧಿಕಾರಿಗಳಿಗೆ ಇವರಿಂದ ರಕ್ಷಣೆ ಸಿಗುತ್ತಿದೆ ಎಂದು ದೂರಿದರು.

ಜಿಲ್ಲಾ ಪಂಚಾಯಿತಿ ಲೆಕ್ಕ ಶೀರ್ಷಿಕೆ 61ರ ಅಡಿಯಲ್ಲಿ ಶಾಲೆಗಳ ಅಭಿವೃದ್ಧಿ ಹಾಗು ವಿದ್ಯಾರ್ಥಿಗಳ ಅಗತ್ಯ ವಸ್ತುಗಳ ಖರೀದಿಗೆ ಮೀಸಲಾದ ಹಣದ ಬಳಕೆಯಲ್ಲೂ ಅಕ್ರಮ ನಡೆದಿದೆ. ಶಾಲೆಗಳಲ್ಲಿ ಕಟ್ಟಡ ಹಾಗು ಮೂಲ ಸೌಕರ್ಯ ಕೊರತೆ ನಡುವೆಯೂ, 58 ಶಾಲೆಗಳಲ್ಲಿ ಮಕ್ಕಳಿಗೆ ಪಾಠ ಬೋಧನೆಗೆ ಟಿವಿ ಅಳವಡಿಸುವ ಉದ್ದೇಶದಿಂದ ಎಸ್‌ಡಿಎಂಸಿ ಅಧ್ಯಕ್ಷರು ಹಾಗು ಮುಖ್ಯ ಶಿಕ್ಷಕರ ಮೇಲೆ ಒತ್ತಡ ಹೇರಿ ಖಾಲಿ ಚೆಕ್ ಪಡೆದು ತಲಾ 55 ಸಾವಿರ ಹಣ ಡ್ರಾ ಮಾಡಲಾಗಿದೆ. ಆದರೆ, ಸುಮಾರು 24 ಸಾವಿರ ಮೌಲ್ಯದ ಕಳಪೆ ಕೂಕಾ ಕಂಪನಿಯ ಟಿವಿ ಸರಬರಾಜು ಮಾಡಲಾಗಿದೆ ಎಂಬುದು ಮಾಹಿತಿ ಹಕ್ಕು ಕಾಯ್ದೆಯಡಿ ಪಡೆದ ದಾಖಲೆಗಳಿಂದ ಬೆಳಕಿಗೆ ಬಂದಿದೆ. ಈ ಬಗ್ಗೆ ಮೇಲಧಿಕಾರಿಗಳು ತನಿಖೆ ನಡೆಸಲು ಆದೇಶಿಸಿದ್ದಾರೆ ಎಂದರು.

ಈ ಆರೋಪ ಕುರಿತು ಸಚಿವರು ಯಾವುದೇ ಸ್ಪಷ್ಟ ಪ್ರತಿಕ್ರಿಯೆ ನೀಡದೆ ಮೌನ ವಹಿಸಿರುವುದು ಹಲವು ಪ್ರಶ್ನೆಗಳಿಗೆ ಕಾರಣವಾಗಿದೆ. ಇದೀಗ ಲಂಚ ನೀಡಲು ಪ್ರೇರಣೆ ನೀಡುವ ರೀತಿ ವ್ಯಕ್ತವಾಗಿರುವ ಹೇಳಿಕೆಗೆ ಸಮರ್ಥನೆ ನೀಡಲು ಹೋಗಿ ಮತ್ತಷ್ಟು ವಿವಾದಕ್ಕೆ ಕಾರಣವಾಗಬಾರದು. ಕ್ಷೇತ್ರ, ಜಿಲ್ಲೆ ಹಾಗು ಅಬಕಾರಿ ಇಲಾಖೆ ಹಿತದೃಷ್ಟಿಯಿಂದ ಸಚಿವರು ಜನರ ವಿಶ್ವಾಸ ಉಳಿಸಿಕೊಳ್ಳುವ ರೀತಿಯಲ್ಲಿ ಕಾರ್ಯ ನಿರ್ವಹಿಸಬೇಕು. ಇಲ್ಲದಿದ್ದರೆ ನೈತಿಕ ಹೊಣೆ ಹೊತ್ತು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದರು. ಮುಖಂಡರಾದ ಲೋಕೇಶ್, ದಿನೇಶ್, ಕುಮಾರ್ ಇದ್ದರು.

# ಇಂದು ಹಿಂದೂ ಮಹಾಗಣಪತಿ ವಿಸರ್ಜನೆ : ಬೈಕ್ ರ‍್ಯಾಲಿ

**ಹಾಸನ:** ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನ ಆವರಣದಲ್ಲಿ ಪ್ರತಿಷ್ಠಾಪಿಸಿರುವ ಹಿಂದೂ ಮಹಾಗಣಪತಿ ವಿಸರ್ಜನಾ ಮಹೋತ್ಸವ ಸೆ.23ರ ಬುಧವಾರ ನಡೆಯಲಿದ್ದು, ಆ ಪ್ರಯುಕ್ತ ಮಂಗಳವಾರ ನಗರದಲ್ಲಿ ಬೃಹತ್ ಬೈಕ್ ರ‍್ಯಾಲಿ ನಡೆಸಲಾಯಿತು.

ಆರ್‌ಎಸ್‌ಎಸ್ ಹಾಗು ಹಿಂದೂಪರ ಸಂಘಟನೆಗಳಿಂದ ಪ್ರತಿವರ್ಷ ಗಣೇಶ ಮೂರ್ತಿ ಪ್ರತಿ ಷ್ಠಾಪಿಸಲಾಗುತ್ತಿದೆ. ಗಣೇಶೋತ್ಸವ ಅಂಗವಾಗಿ ಸಹ್ಯಾದ್ರಿ ವೃತ್ತದಿಂದ ಹೇಮಾವತಿ ಪ್ರತಿಮೆ ವರೆಗೆ ಕೇಸರಿ ಬಾವುಟ, ಸ್ವಾತಂತ್ರ್ಯ ಹೋರಾಟಗಾರರ ಭಾವಚಿತ್ರಗಳನ್ನು ರಸ್ತೆಯ ಎರಡೂ ಬದಿಗೆ ಹಾಕಿದ್ದು ವಿದ್ಯುತ್ ಅಲಂಕಾರ ಗಮನ ಸೆಳೆಯುತ್ತಿದೆ.



ಸೆ.14 ರಿಂದ ಪ್ರತಿದಿನ ಮಧ್ಯಾಹ್ನ ಹಾಗು ಸಂಜೆ ಮಹಾಮಂಗಳಾರತಿ ಬಳಿಕ ಅನ್ನ ಸಂತ ರ್ಪಣೆ ನೆರವೇರಿಸಲಾಗಿದೆ. ಬುಧವಾರ ವಿಸರ್ಜನಾ ಮಹೋತ್ಸವ ನಡೆಯಲಿದ್ದು ಜಿಲ್ಲೆಯ ವಿವಿಧೆಡೆಯಿಂದ ಸಾರ್ವಜನಿಕರು ಪಾಲ್ಗೊಳ್ಳುವ ನಿರೀಕ್ಷೆ ಇದೆ. ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸ್ ಭದ್ರತೆ ಕೈಗೊಳ್ಳಲಾಗಿದೆ. ಬೈಕ್ ರ‍್ಯಾಲಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ, ಪ್ರಸನ್ನಕುಮಾರ್, ಹಿಂದೂ ಗಣಪತಿ ಸಮಿತಿ ಅಧ್ಯಕ್ಷ ವಾಸು, ಸಾಯಿ ಪ್ರಕಾಶ್, ನಗರಸಭೆ ಮಾಜಿ ಅಧ್ಯಕ್ಷ ಆರ್.ಮೋಹನ್, ಖಜಾಂಚಿ ಲಾವಣ್ಯ, ನಿರ್ದೇಶಕ ಶರತ್, ರಕ್ಷಿತ್ ಭಾರಧ್ವಾಜ್, ಮೋಹನ್, ಕಟ್ಟಾಯ ಶಿವಕುಮಾರ್, ಶೋಭನ್ ಬಾಬು, ಮಹಿಪಾಲ್, ಪ್ರಸನ್ನಕುಮಾರ್ ಇತರರಿದ್ದರು.

## ಕೆಪಿಎಸ್‌ಸಿ ಮುಚ್ಚುವ ಚಿಂತನೆ ಇದೆ: ಸಿ.ಎಂ.

**ಬೆಂಗಳೂರು:** ಸದಾ ವಿವಾದಗಳಿಂದಲೇ ಸುದ್ದಿಯಲ್ಲಿರುವ ಕರ್ನಾಟಕ ಲೋಕಸೇವಾ ಆಯೋಗದ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಶಿವಕುಮಾರ್ ಅವರು ಆಯೋಗ ವನ್ನು ಮುಚ್ಚುವ ಕುರಿತು ಚಿಂತನೆ ನಡೆದಿದೆ ಎಂಬ ಸ್ಫೋಟಕ ಹೇಳಿಕೆ ನೀಡಿದರು.

ಸುದ್ದಿಗಾರರೊಂದಿಗೆ ಮಂಗಳವಾರ ಮಾತನಾಡಿದ ಅವರು, ಪಶು ವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮಗಳ ಕುರಿತು ಪೊಲೀಸ್ ತನಿಖೆ ನಡೆಯುತ್ತಿದೆ ಎಂದರು.

# ಪೌಷ್ಟಿಕ ಆಹಾರ ಯೋಜನೆ ಜಾರಿಗೆ ಮನವಿ

## ಹಸಲರು ಸಮುದಾಯದಿಂದ ಸಚಿವ ಕೆ.ಹೆಚ್.ಮುನಿಯಪ್ಪ ಭೇಟಿ

• ಪ್ರಜೋದಯ ವರದಿ

**ಹಾಸನ:** ಸಕಲೇಶಪುರ ತಾಲ್ಲೂಕಿನ ಆದಿವಾಸಿ ಬುಡಕಟ್ಟು ಹಸಲರು ಸಮುದಾಯಕ್ಕೆ ಪೌಷ್ಟಿಕ ಆಹಾರ ಸರಬರಾಜು ಮಾಡುವ ಯೋಜನೆಯನ್ನು ಶೀಘ್ರ ಜಾರಿಗೊಳಿಸುವಂತೆ ಒತ್ತಾಯಿಸಿ ಸಚಿವರಲ್ಲಿ ಶಾಸಕ ಸಿಮೆಂಟ್ ಮಂಜು ಅವರು ಮನವಿ ಮಾಡಿದ್ದಾರೆ.



ಮಂಗಳವಾರ ವಿಧಾನಸೌಧದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವ ಕೆ.ಹೆಚ್.ಮುನಿಯಪ್ಪ ಅವರನ್ನು ಹಸಲರು ಸಮುದಾಯದ ನಿಯೋಗದೊಂದಿಗೆ ಭೇಟಿ ಮಾಡಿ, ಮನವಿ ಸಲ್ಲಿಸಿದರು. ಶಿವಮೊಗ್ಗಾ, ಚಿಕ್ಕಮಗಳೂರು ಸೇರಿ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಈಗಾಗಲೇ ಪೌಷ್ಟಿಕ ಆಹಾರ ಸರಬ ರಾಜು ಯೋಜನೆ ಜಾರಿಯಲ್ಲಿದೆ. ಇದೇ ಮಾದರಿಯಲ್ಲಿ ಜಿಲ್ಲೆಯಲ್ಲಿಯೂ ಯೋಜನೆಯನ್ನು ಜಾರಿಗೊಳಿಸುವ ಮೂಲಕ ಸಕಲೇಶಪುರ ತಾಲ್ಲೂಕಿನಲ್ಲಿ ನೆಲೆಸಿರುವ ಹಸಲರು ಸಮುದಾಯದ ಜನರಿಗೆ ಅನುಕೂಲ ಕಲ್ಪಿಸಬೇಕೆಂದು ಕೋರಿದರು.

ಆರೋಗ್ಯದ ದೃಷ್ಟಿಯಿಂದ ಯೋಜನೆ ವಿಸ್ತರಿಸುವ ಅಗತ್ಯವಿದ್ದು, ಈ ಕುರಿತು ಶೀಘ್ರ ಕ್ರಮ ಕೈಗೊಳ್ಳುವಂತೆ ಸಚಿವರಲ್ಲಿ ಕೋರಲಾಯಿತು.

## ಬಿಜೆಪಿಯಿಂದ ಗೌರವಯುತ ಲಂಚದ ಅಂಚೆ ಚೀಟಿ

**ಬೆಂಗಳೂರು:** ಶಿವಲಿಂಗೇಗೌಡ ಅವರ ಹೇಳಿಕೆಯನ್ನೇ ಅಸ್ತ್ರವಾಗಿಸಿಕೊಂಡು ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸುತ್ತಿರುವ ಪ್ರತಿಪಕ್ಷ ಬಿಜೆಪಿ, ಮಂಗಳವಾರ ಗೌರವಯುತ ಲಂಚದ ವಿಶೇಷ ಅಂಚೆ ಚೀಟಿಯನ್ನು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

ಲಂಚವನ್ನು ಗೌರವಯುತವಾಗಿ ಕೊಡಬೇಕೆಂದು ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಲಿಖಿತ ನಿಯಮ ಜಾರಿಗೊಳಿಸಿದೆ. ಹಾಗೇ ಸರ್ಕಾರ ನೂರು ದಿನ ಪೂರೈಸಿದ ಸಂದರ್ಭ ವಿಶೇಷ ಅಂಚೆ ಚೀಟಿ ಬಿಡುಗಡೆ ಮಾಡಿ, ಲಂಚಾವತಾರಕ್ಕೆ ಪ್ರೋತ್ಸಾಹ ನೀಡಬಹುದೆಂದು ಕಿಡಿಕಾರಿದೆ.




ಶನಿವಾರ ಸಕಲೇಶಪುರದಲ್ಲಿ ನಡೆದಿದ್ದ ಪ್ರಜಾಸೇವಾ ಆಂದೋಲನದ ಸಂದರ್ಭದಲ್ಲಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರು ಲಂಚ ನೀಡಲು ಪ್ರಚೋದಿಸುವಂತಹ ಹೇಳಿಕೆ ನೀಡಿದ್ದಾರೆಂಬ ಆರೋಪವಿದ್ದು, ಈ ಸಂಬಂಧ ವಕೀಲರ ತಂಡವು ಹಾಸನ ಲೋಕಾಯುಕ್ತ ಕಚೇರಿಗೆ ಸೋಮವಾರ ದೂರು ಸಲ್ಲಿಸಿತ್ತು. ಮಂಗಳವಾರ ಮೈಸೂರಿನ ವಾಯ್ಸ್ ಆಫ್ ಪೀಪಲ್ ಸಂಸ್ಥೆಯಿಂದ ಸಚಿವ ಶಿವಲಿಂಗೇಗೌಡ ವಿರುದ್ಧ ಲೋಕಾಯುಕ್ತಕ್ಕೆ ದೂರು ಸಹ ನೀಡಿದೆ.

ಈ ಬಗ್ಗೆ ಮಾಜಿ ಸಚಿವ ಸಿ.ಟಿ.ರವಿ ಮಾತನಾಡಿ, ಸಚಿವರಾದ ಶಿವಲಿಂಗೇಗೌಡ ಮಾತಿನ ಬಗ್ಗೆ ಸರ್ಕಾರದ ನಿಲುವು ಏನೆಂಬುದನ್ನು ಸ್ಪಷ್ಟಪಡಿಸಬೇಕು. ಮಾಡಿದ ಕೆಲಸಕ್ಕೆ ಧರ್ಮ ಅಂತ ಹೇಳಿದ್ದಾರೆ. ಸರ್ಕಾರದ ಸಹಮತ ಇದ್ದರೆ ಯಾವ ಇಲಾಖೆಯಲ್ಲಿ ಎಷ್ಟು ರೇಟ್ ಕಾರ್ಡ್ ಇದೆ ಎಂಬುದನ್ನು ಬಹಿರಂಗಪಡಿಸಿ, ನಾನು ಸ್ವಾಗತ ಮಾಡುತ್ತೇನೆಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮನೆಯಿಂದ ಹೊರಬಾರದ ಸ್ಥಿತಿ | ವ್ಯಾಪಾರಕ್ಕೂ ಹೊಡೆತ

# ಹಾಸನಾಂಬ ಜಾತ್ರೆ: ಸ್ಥಳೀಯರಿಗೆ ದಿಗ್ಬಂಧನ ಭೀತಿ

-ಮಲ್ಲಿಕಾರ್ಜುನ ಕೊಚ್ಚರಗಿ

• ಪ್ರಜೋದಯ ವರದಿ

ಹಾಸನ: ಶಕ್ತಿದೇವತೆ ಹಾಸನಾಂಬ ಜಾತ್ರಾ ಮಹೋತ್ಸವಕ್ಕೆ ತಿಂಗಳಷ್ಟೇ ಉಳಿದಿದ್ದು ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಳ್ಳುತ್ತಿದೆ. ಆದರೆ ದೇವಾಲಯ ಸುತ್ತಲಿನ ನಿವಾಸಿಗಳಿಗೆ ಈಗಿನಿಂದಲೇ ದಿಗ್ಬಂಧನದ ಭೀತಿ ಕಾಡುತ್ತಿದೆ.

ಅ.29 ರಿಂದ ನ.9ರವರೆಗೆ ದೇವಿ ದರ್ಶನ ಕರುಣಿಸಲಿದ್ದಾಳೆ. ವರ್ಷದಿಂದ ವರ್ಷಕ್ಕೆ ಹಾಸನಾಂಬ ದರ್ಶನಕ್ಕೆ ಬರುವ ಭಕ್ತರ ಸಂಖ್ಯೆ ಏರಿಕೆಯಾಗುತ್ತಲೇ ಇದೆ. ಜಾತ್ರೆ ಆರಂಭದ 15 ದಿನಗಳ ಮೊದಲೇ ವ್ಯಾಪ್ತಿಯಲ್ಲಿ ಬ್ಯಾರಿಕೇಡ್ ಅಳವಡಿಕೆ, ರಸ್ತೆ ಬಂದ್ ಪ್ರಕ್ರಿಯೆ ಶುರುವಾ ಗುತ್ತವೆ. ರಸ್ತೆಯಲ್ಲಿ ದಿನಸಿ, ಪ್ಲಾಸ್ಟಿಕ್ ಲೋಟ, ಅಡಿಕೆ ತಟ್ಟೆ, ನೀರಿನ ಬಾಟಲಿ ಮಾರಾಟದ ಹೋಲ್‌ಸೇಲ್ ಮಳಿಗೆಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು ಕನಿಷ್ಟ ಒಂದು ತಿಂಗಳು ವ್ಯವಹಾರಕ್ಕೆ ಹೊಡೆತ ಬೀಳುತ್ತದೆ. ಜೊತೆಗೆ ಸಾರ್ವಜನಿಕ ಸಂಚಾರಕ್ಕೂ ಭಾರೀ ತೊಂದರೆಯಾಗುತ್ತದೆ. ಪ್ರತಿ ವರ್ಷ ಹಾಸನಾಂಬ ಜಾತ್ರಾ ಮಹೋತ್ಸವ ಸಂದರ್ಭದಲ್ಲಿ ಅಕ್ಷರಶ: ನರಕಯಾತನೆ ಅನುಭವಿ ಸುವಂತಾಗಿದೆ. ವ್ಯಾಪಾರವನ್ನೇ ನಂಬಿರುವ ನೂರಾರು ಜನರು ಅಂಗಡಿ ಮುಂಗಟ್ಟುಗಳಿಗೆ ಬೀಗ ಹಾಕಿ ನಿರುದ್ಯೋಗಿಗಳಾಗಬೇಕಾಗುತ್ತದೆ. ಈ ಸಮಸ್ಯೆ ಜಿಲ್ಲಾಡಳಿತಕ್ಕೆ ಗೊತ್ತಿದ್ದರೂ ಪರಿಹಾರ ಕೈಗೊಳ್ಳದೇ ಇರುವುದು ಸ್ಥಳೀಯರ ಅಸಮಾಧಾನಕ್ಕೆ ಕಾರಣವಾಗಿದೆ.

2025ರಲ್ಲಿ 26.13 ಲಕ್ಷ ಭಕ್ತರು ದೇವಿ ದರ್ಶನ ಪಡೆದಿದ್ದರು. 25,59,87,327 ರೂ. ಆದಾಯ ಗಳಿಕೆ ಮೂಲಕ ಶಕ್ತಿ ದೇವತೆ ಕ್ಷೇತ್ರಕ್ಕೆ ಮತ್ತಷ್ಟು ಪ್ರಖ್ಯಾತಿ ಪಡೆದಿದೆ. ಪ್ರತಿವರ್ಷ ಜಾತ್ರಾ ಮಹೋತ್ಸವದಲ್ಲಿ ಕಿ.ಮೀ.ಗಟ್ಟಲೇ ಸರದಿ ಸಾಲು ಇದ್ದರೂ ಭಕ್ತರು ಅಂದಾಜು 10 ರಿಂದ 12 ಗಂಟೆ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆಯುತ್ತಾರೆ. ಹಿಂದೆ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಕೃಷ್ಣಬೈರೇಗೌಡ ಅವರು ಸ್ಥಳದಲ್ಲೇ ಮೊಕ್ಕಾಂ ಹೂಡಿ ಅಚ್ಚುಕಟ್ಟು ವ್ಯವಸ್ಥೆ ಮೂಲಕ ಗಮನ ಸೆಳೆದಿದ್ದರು. ಅಂದಾಜು 12 ಕಿ.ಮೀ. ಬ್ಯಾರಿಕೇಡ್ ಅಳವಡಿಕೆ, ಭಕ್ತರಿಗೆ ಗಾಳಿ, ಬೆಳಕು ಹಾಗು ನೆರಳಿನ ವ್ಯವಸ್ಥೆ ಮಾಡುವ ಮೂಲಕ ಯಾವುದೇ ತೊಂದರೆಯಾಗದಂತೆ ಕ್ರಮ ಕೈಗೊಂಡಿದ್ದರು. ಈ ಬಾರಿಯೂ ಅದೇ ನಿರೀಕ್ಷೆಯಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬರುವ ಸಾಧ್ಯತೆ ಇದೆ.



**ಸ್ಥಳೀಯ ನಿವಾಸಿಗಳಿಗೆ ಭಾರೀ ತೊಂದರೆ**

ನಾಡಿನ ಲಕ್ಷಾಂತರ ಜನರಿಗೆ ಹಾಸನಾಂಬ ಜಾತ್ರೆ ಎಂದರೆ ಸಂಭ್ರಮವಾದರೆ ದೇವಾಲಯ ಸುತ್ತಲಿನ ಜನರಿಗೆ ನೋವಿನ ಸಂಗತಿಯಾಗಿ ಮಾರ್ಪಟ್ಟಿದೆ. ಪ್ರತಿ ಮನೆ ಮುಂದೆ ಬ್ಯಾರಿಕೇಡ್ ಹಾಕುವುದರಿಂದ ಕನಿಷ್ಟ 20 ದಿನಗಳ ವರೆಗೆ ಮನೆಯಿಂದ ಹೊರಬರಲು ಸಾಧ್ಯವಾಗುವುದಿಲ್ಲ. ಮಹಾನಗರ ಪಾಲಿಕೆ ಕುಟುಂಬ ಸದಸ್ಯರಿಗೆ ಗುರುತಿನ ಚೀಟಿ ನೀಡುತ್ತಾರೆ ಯಾದರೂ ಭದ್ರತೆಗೆ ನಿಲ್ಲುವ ಪೊಲೀಸರು ತಗಾದೆ ತೆಗೆಯುವುದು ತಪ್ಪುವುದಿಲ್ಲ. ಹೀಗಾಗಿ ಪೊಲೀಸರು-ಸ್ಥಳೀಯರ ವಾಗ್ವಾದ ಕೊನೆಯಿರದ ಸಂಘರ್ಷ ಎಂಬಂತಾಗಿದೆ.

ಕಳೆದ ವರ್ಷ ಚೌಡೇಶ್ವರಿ ದೇವಾಲಯ ಸಮೀಪದ ಮನೆಯೊಂದರ 80 ವರ್ಷದ ವೃದ್ಧೆ ಕಾಲು ಜಾರಿ ಮನೆಯಲ್ಲಿ ಬಿದ್ದು ತೀವ್ರ ರಕ್ತ ಸ್ರಾವದಿಂದ ಬಳಲುತ್ತಿದ್ದರು. ಅವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಲು ಸ್ಥಳಕ್ಕೆ ಆಟೋ ಬರಲು ಸಾಧ್ಯವಾಗಲಿಲ್ಲ. ಆ ಸಮಯದಲ್ಲಿ ಗಣ್ಯರು ಬಂದಿದ್ದರಿಂದ ಶಿಷ್ಟಾಚಾರ ಪಾಲನೆಗಾಗಿ ವಾಹನಗಳು ಸಂಚರಿಸುವಂತಿರಲಿಲ್ಲ. ಈ ಬಾರಿಯೂ ಅಂತಹ ವಿಷಮ ಪರಿಸ್ಥಿತಿ ನಿರ್ಮಾಣವಾಗಬಾರದೆಂದು ವೃದ್ಧೆ ಈಗಲೇ ಮನೆ ಖಾಲಿ ಮಾಡಿದ್ದಾರೆ.

## ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಲಿ

ಜಿಲ್ಲಾಡಳಿತವು ಹಾಸನಾಂಬ ಜಾತ್ರಾ ಮಹೋತ್ಸವ ಯಶಸ್ಸಿಗೆ ನೀಡುವ ಗಮನವನ್ನು ಸ್ಥಳೀಯರ ಹಿತಾಸಕ್ತಿಗೂ ನೀಡಬೇಕಾಗುತ್ತದೆ. ಈ ಹಿಂದಿನ ಜಿಲ್ಲಾಧಿಕಾರಿ ಸತ್ಯಭಾಮ ಅವರು ದೇವಾಲಯ ಸುತ್ತಲಿನ ಜಾಗ ಸಮೀಕ್ಷೆ ನಡೆಸಿ ಸೂಕ್ತ ಪರಿಹಾರದೊಂದಿಗೆ ಶಾಶ್ವತವಾಗಿ ಸ್ಥಳಾಂತ ರಿಸುವ ಕುರಿತು ಎರಡು ಸಭೆ ನಡೆಸಿದ್ದರು. ಸ್ಥಳೀಯರ ಬೇಡಿಕೆ ಮತ್ತು ನಿಗದಿಯಾದ ಪರಿಹಾರ ಮೊತ್ತದ ನಡುವೆ ಭಾರೀ ವ್ಯತ್ಯಾಸ ಕಂಡುಬಂದಿದ್ದರಿಂದ ಆ ಯೋಜನೆಯನ್ನು ಕೈಬಿಡಲಾ ಯಿತು. ಕೋಟ್ಯಾಂತರ ರೂಪಾಯಿ ಹಣ ವಿನಿಯೋಗಿಸಲು ಸಾಧ್ಯವಾಗದಿದ್ದರೆ ಕನಿಷ್ಟ ಜಾತ್ರೆ ಸಮಯದಲ್ಲಾದರೂ ಸ್ಥಳೀಯರಿಗೆ ತೊಂದರೆಯಾಗದಂತೆ ಎಚ್ಚರ ವಹಿಸಬೇಕೆಂದು ವ್ಯಾಪಾರಿ ಹೆಚ್.ಎನ್.ಅಶೋಕ್ ಅವರು ಆಗ್ರಹಿಸಿದರು.

# ಅನಂತ ನಾಗ್‌ಗೆ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನ

## ಕನ್ನಡದ ಪ್ರತಿಷ್ಠಿತ ನಟನಿಗೆ ರಾಷ್ಟ್ರಪತಿಗಳಿಂದ ಗೌರವ ಸಮರ್ಪಣೆ

• ಪ್ರಜೋದಯ ವರದಿ

**ಏಕ್ತಾ ನಗರ:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಂಗಳವಾರ ಕನ್ನಡದ ಖ್ಯಾತ ನಟ ಅನಂತ ನಾಗ್ ಅವರಿಗೆ ಭಾರತೀಯ ಚಲನಚಿತ್ರ ರಂಗದ ಅತ್ಯುನ್ನತ ಗೌರವವಾದ 'ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ'ಯನ್ನು ನೀಡಿ ಗೌರವಿಸಿದರು. ಇದಕ್ಕು ಮುನ್ನ ಪ್ರಶಸ್ತಿ ಸಮಾರಂಭಕ್ಕೆ ಆಗಮಿಸಿದ ಅನಂತ್‌ನಾಗ್ ಅವರಿಗೆ ಸ್ಟ್ಯಾಂಡಿಂಗ್ ಒವೇಶನ್ ನೀಡಲಾಯಿತು.

ಗುಜರಾತ್‌ನ ನರ್ಮದಾ ಜಿಲ್ಲೆಯ ಏಕ್ತಾ ನಗರದಲ್ಲಿ ಮಂಗಳವಾರ ನಡೆದ 72ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿಗಳು, ಅನಂತ ನಾಗ್ ಅವರಿಗೆ ಪ್ರತಿಷ್ಠಿತ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನ ಮಾಡಿದರು. ಐದು ದಶಕಗಳಿಗೂ ಹೆಚ್ಚು ಕಾಲ ಭಾರತೀಯ ಚಿತ್ರರಂಗಕ್ಕೆ ನೀಡಿದ ಕೊಡುಗೆಯನ್ನು ಗುರುತಿಸಿ ಅನಂತ್ ನಾಗ್ ಅವರಿಗೆ ಈ ಪ್ರಶಸ್ತಿ ನೀಡಲಾಯಿತು.

ಏಕ್ತಾ ನಗರದಲ್ಲಿರುವ ಸ್ಟ್ಯಾಚ್ಯೂ ಆಫ್ ಯೂನಿಟಿ'ಯಲ್ಲಿ ನಡೆಯುತ್ತಿರುವ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, 2024ನೇ ಸಾಲಿನ ಸಿನಿಮಾ ಸಾಧಕರಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ವಿವಿಧ ವಿಭಾಗಗಳಲ್ಲಿ ಒಟ್ಟು 92 ಮಂದಿ ಪ್ರಶಸ್ತಿಗಳನ್ನು ಸ್ವೀಕರಿಸಿದ್ದಾರೆ.

ದೇಶದ ಅತ್ಯಂತ ಜನಪ್ರಿಯ ನಟರಲ್ಲಿ ಒಬ್ಬರಾದ ಅನಂತ್‌ನಾಗ್, ಐದು ದಶಕಗಳ ಸುದೀರ್ಘ ಹಾಗೂ ಗಮನಾರ್ಹ ವೃತ್ತಿಜೀವನದಲ್ಲಿ 300 ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಟಿಸಿದ್ದು, ಕನ್ನಡ ಹಾಗೂ ಭಾರತೀಯ ಚಲನಚಿತ್ರ ರಂಗಕ್ಕೆ ಅಪಾರ ಕೊಡುಗೆ ನೀಡಿದ್ದಾರೆ.

ಅನಂತ್‌ನಾಗ್ ಅವರು ಜನಪ್ರಿಯ ಟೆಲಿವಿಷನ್ ಸರಣಿ 'ಮಾಲ್ಗುಡಿ ಡೇಸ್'ನಲ್ಲಿನ ತಮ್ಮ ಅಭಿನಯಕ್ಕೂ ಹೆಸರುವಾಸಿಯಾಗಿದ್ದಾರೆ. ಈ ಜನಪ್ರಿಯ ನಟನಿಗೆ 2025ರಲ್ಲಿ ಪದ್ಮಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿತ್ತು.

ಇನ್ನು ರಕ್ಷಿತ್ ಶೆಟ್ಟಿ ನಿರ್ಮಾಣದ ಕನ್ನಡದ 'ಮಿಥ್ಯ' 3 ಪ್ರಶಸ್ತಿಗಳನ್ನು, ತುಳುವಿನ 'ಇಂಬು' 1 ಪ್ರಶಸ್ತಿಯನ್ನು ಪಡೆದುಕೊಂಡಿದೆ.

ಕನ್ನಡ ಚಿತ್ರರಂಗದ ಅತ್ಯಂತ ಜನಪ್ರಿಯ ನಟ ರಕ್ಷಿತ್ ಶೆಟ್ಟಿ ಮಾಲೀಕತ್ವದ ಪರಂವಃ ಸ್ಟುಡಿಯೋಸ್ ಮತ್ತು ಪ್ರಸಿದ್ಧ ಕೆಆರ್‌ಜಿ ಸ್ಟುಡಿಯೋಸ್ ಜಂಟಿಯಾಗಿ ನಿರ್ಮಾಣ ಮಾಡಿರುವ ಮಿಥ್ಯ ಸಿನಿಮಾ 3 ಪ್ರಶಸ್ತಿಗೆ ಪಾತ್ರವಾಗಿದೆ.




### ಐದು ಬಾರಿ ಕರ್ನಾಟಕ ರಾಜ್ಯ ಪ್ರಶಸ್ತಿ

ಚಲನಚಿತ್ರಗಳಲ್ಲದೆ ಕಿರುತೆರೆ, ರಂಗಭೂಮಿಯಲ್ಲೂ ಅನಂತ್ ನಾಗ್ ಅವರು ಹೆಸರುವಾಸಿಯಾಗಿದ್ದಾರೆ. ಖ್ಯಾತ ಲೇಖಕ ಆರ್.ಕೆ. ನಾರಾಯಣ್ ಅವರ ಕಥೆಗಳನ್ನು ಆಧರಿಸಿದ ಜನಪ್ರಿಯ ದೂರದರ್ಶನ ಧಾರಾವಾಹಿ ಮಾಲ್ಗುಡಿ ಡೇಸ್‌ಟನಲ್ಲಿ ಅವರು ನಟಿಸಿದ್ದಾರೆ.
ಈ ಹಿರಿಯ ನಟ ತಮ್ಮ ಸುದೀರ್ಘ ವೃತ್ತಿಜೀವನದಲ್ಲಿ ಐದು ಬಾರಿ ಕರ್ನಾಟಕ ರಾಜ್ಯ ಚಲನಚಿತ್ರ ಪ್ರಶಸ್ತಿಯನ್ನು ಪಡೆದಿದ್ದಾರೆ.

### ಸ್ವರ್ಣ ಕಮಲ ಪದಕ, 10 ಲಕ್ಷ ರೂ. ನಗದು ಬಹುಮಾನ

ಈ ಪ್ರಶಸ್ತಿಯು ಒಂದು ಸ್ವರ್ಣ ಕಮಲ ಪದಕ, ಒಂದು ಶಾಲು ಮತ್ತು 10 ಲಕ್ಷ ರೂಪಾಯಿ ನಗದು ಬಹುಮಾನವನ್ನು ಒಳಗೊಂಡಿದೆ. ಪ್ರತಿವರ್ಷ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳ ಪ್ರದಾನ ಸಮಾರಂಭದಲ್ಲಿ ಭಾರತದ ರಾಷ್ಟ್ರಪತಿಗಳು ಈ ಪ್ರಶಸ್ತಿಯನ್ನು ನೀಡುತ್ತಾರೆ. 1969ರಲ್ಲಿ ನಡೆದ 17ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಸಮಾರಂಭದಲ್ಲಿ ಖ್ಯಾತ ನಟಿ ದೇವಿಕಾ ರಾಣಿ ಅವರು ಈ ಪ್ರಶಸ್ತಿಯನ್ನು ಮೊಟ್ಟ ಮೊದಲ ಬಾರಿಗೆ ಸ್ವೀಕರಿಸಿದ್ದರು. 2024ರ ಹೊತ್ತಿಗೆ ಒಟ್ಟು 54 ಮಂದಿ ಈ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಡಾ. ರಾಜ್ ಕುಮಾರ್, ಸಿನಿಮಾಟೊಗ್ರಾಫರ್ ವಿ.ಕೆ.ಮೂರ್ತಿ ಸೇರಿದಂತೆ ಕರ್ನಾಟಕದ ಮೂವರಿಗೆ ಮಾತ್ರ ಈ ಪ್ರಶಸ್ತಿ ಬಂದಿದೆ.

## ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ



• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ರಾಮೇಶ್ವರನಗರದ ವಿ.ವಿ ಕೇಂದ್ರ ಹಾಗೂ 66 ಕೆ.ವಿ. ಮಾರ್ಗಗಳಲ್ಲಿ ತ್ರೈಮಾಸಿಕ/ತುರ್ತು ನಿರ್ವಹಣಾ ಕೆಲಸವನ್ನು ಹಮ್ಮಿಕೊಂಡಿರುವುದರಿಂದ ಸೆ. 24 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ರಾಮೇಶ್ವರನಗರ ವಿ.ವಿ ಕೇಂದ್ರದಿಂದ ಕೆ.ಆರ್.ಪುರಂ, ಉದಯಗಿರಿ, ರಿಂಗ್ ರೋಡ್, ಬೂವನಹಳ್ಳಿ, ಸತ್ಯಮಂಗಲ, ಶಂಕರಿಪುರಂ, ದೊಡ್ಡಮರ, ಸಿರಿ ಕಲ್ಚರ್, ಕಾಟಿಹಳ್ಳಿ, ಎಸ್.ಎಂ ಕೃಷ್ಣ ನಗರ ಮತ್ತು ಸುತ್ತಮುತ್ತಲ್ಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

ಸಾರ್ವಜನಿಕರು ಸಹಕರಿಸುವಂತೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಕಾರ್ಯಾಚರಣೆ ವಿಭಾಗದ ಕಾರ್ಯ ನಿರ್ವಾಹಕ ಇಂಜಿನಿಯರ್ ಅವರು ಕೋರಿದ್ದಾರೆ.

## ಟಿ- 20: ಜಪಾನ್ ವಿರುದ್ಧ ಭಾರತಕ್ಕೆ ಜಯ




ಸನೊ (ಜಪಾನ್): ಆತಿಥೇಯ ಜಪಾನ್ ತಂಡದ ವಿರುದ್ಧ ನಡೆದ ಏಕೈಕ ಟಿ20 ಪಂದ್ಯದಲ್ಲಿ ಭಾರತ ಕ್ರಿಕೆಟ್ ತಂಡವು 2 ರನ್‌ಗಳ ರೋಚಕ ಗೆಲುವು ದಾಖಲಿಸಿದೆ.

ಮಳೆಯಿಂದಾಗಿ ಐದು ಓವರ್‌ಗಳಿಗೆ ಸೀಮಿತಗೊಂಡ ಪಂದ್ಯದಲ್ಲಿ ಟಾಸ್ ಗೆದ್ದ ಭಾರತ ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿತು. ಜಪಾನ್ ಬೌಲಿಂಗ್ ದಾಳಿಗೆ ನಲುಗಿದ ಭಾರತ 5 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು ಕೇವಲ 32 ರನ್ ಕಲೆಹಾಕಿತು. ಈ ಸುಲಭ ಗುರಿ ಬೆನ್ನಟ್ಟಿದ ಜಪಾನ್ ತಂಡವು 3 ವಿಕೆಟ್ ಕಳೆದುಕೊಂಡು 30 ರನ್ ಗಳಿಸಲಷ್ಟೇ ಶಕ್ತವಾಯಿತು.

32 ರನ್‌ಗಳ ಗುರಿ ಬೆನ್ನಟ್ಟಿದ ಜಪಾನ್ ತಂಡದ ಪರ ನಾಯಕ ಕೆಂಡೆಲ್ ಕಡೋವಾಕಿ-ಫ್ಲೆಮಿಂಗ್ 12 ರನ್ ಗಳಿಸಿದರು. ಭಾರತದ ಪರ ವಾಷಿಂಗ್‌ಟನ್ ಸುಂದರ್ 2 ವಿಕೆಟ್ ಪಡೆದು ಮಿಂಚಿದರು.

ಆ ಮೂಲಕ ಭಾರತ ತಂಡವು ಎರಡು ರನ್‌ಗಳ ರೋಚಕ ಗೆಲುವು ದಾಖಲಿಸಿತು.

ಇದಕ್ಕೂ ಮೊದಲು ಬ್ಯಾಟಿಂಗ್ ಮಾಡಿದ ಭಾರತದ ಪರ ಯಾವುದೇ ಬ್ಯಾಟರ್ ಕೂಡ ಉತ್ತಮ ಪ್ರದರ್ಶನ ನೀಡಲಿಲ್ಲ. ಅಭಿಷೇಕ್ ಶರ್ಮಾ ಶೂನ್ಯಕ್ಕೆ ಔಟ್ ಆದರೆ, ಸಂಜು ಸ್ಯಾಮ್ಸನ್ (9), ಇಶಾನ್ ಕಿಶನ್ (3) ರನ್ ಗಳಿಸಿ ಪೆವಿಲಿಯನ್ ಸೇರಿಕೊಂಡರು. ಅಜೇಯ 16 ರನ್ ಗಳಿಸಿದ ನಾಯಕ ಶ್ರೇಯಸ್ ಅಯ್ಯರ್ ಭಾರತದ ಪರ ಗರಿಷ್ಠ ರನ್ ಸ್ಕೋರರ್ ಎನಿಸಿಕೊಂಡರು.

ಐದು ಓವರ್‌ಗಳ ಇನಿಂಗ್ಸ್‌ನಲ್ಲಿ ಭಾರತ ಕೇವಲ 2 ಬೌಂಡರಿಗಳಿಸಲಷ್ಟೇ ಶಕ್ತವಾಯಿತು. ಇನಿಂಗ್ಸ್‌ನಲ್ಲಿ ಒಂದೇ ಒಂದು ಸಿಕ್ಸರ್ ಕೂಡ ದಾಖಲಾಗಲಿಲ್ಲ. ಜಪಾನ್ ಪರ ಚಾರ್ಲಿ ಹರಾ-ಹಿಂಝ್ 2 ವಿಕೆಟ್, ಇಬ್ರಾಹಿಂ ಟಕಾಝುಕಿಯಾ ಹಾಗೂ ಬೆಂಜಮಿನ್ ಇಟೊ-ಡೇವಿಸ್ ತಲಾ ಒಂದೊಂದು ವಿಕೆಟ್ ಪಡೆಯುವ ಮೂಲಕ ಮಿಂಚಿದರು.

# ಶಿಕ್ಷಕರು ಉರಿಯುವ ದೀಪದಂತಿರಬೇಕು

## ಸಂಕಲಾಪುರದಲ್ಲಿ ಗುರುವಂದನಾ ಕಾರ್ಯಕ್ರಮ




• ಪ್ರಜೋದಯ ವರದಿ

**ಆಲೂರು:** ದೀಪವು ತಾನು ಉರಿದು ಇತರ ದೀಪಗಳನ್ನು ಹೊತ್ತಿಸುವಂತೆ, ಶಿಕ್ಷಕರು ನಿರಂತರ ವಿದ್ಯಾರ್ಥಿಗಳಾಗಿ ಕಲಿತು ಕಲಿಸಬೇಕು ಎಂದು ಹಾಸನ ಜಿಲ್ಲಾ ಪ್ಲಾಂಟರ್ಸ್ ಸಂಘದ ಮಾಜಿ ಅಧ್ಯಕ್ಷ ಸಿ.ಎಸ್.ಮಹೇಶ್ ಚಿಕ್ಕೋಟೆ ತಿಳಿಸಿದರು.

ತಾಲ್ಲೂಕಿನ ಸಂಕಲಾಪುರಮಠದ ಜಾನ್ಸಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಏರ್ಪಡಿಸಲಾಗಿದ್ದ ಶಿಕ್ಷಕರ ದಿನಾಚರಣೆ ಹಾಗೂ ಗುರುವಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಶಿಕ್ಷಕ ಕೇವಲ ವ್ಯಕ್ತಿಯಲ್ಲ. ಆತ ಜ್ಞಾನಜ್ಯೋತಿ ಬೆಳಗಿಸುವ ಮಹಾನ್ ಶಕ್ತಿ. ಮಕ್ಕಳಲ್ಲಿ ಉತ್ತಮ ಮಾನವೀಯ ಮೌಲ್ಯಗಳನ್ನು ಬೆಳೆಸುವ, ಉತ್ತಮ ನಾಗರೀಕರನ್ನಾಗಿ ರೂಪಿಸುವ ಗುರುತರ ಹೊಣೆಗಾರಿಕೆ ಎಲ್ಲಾ ಶಿಕ್ಷಕರ ಮೇಲಿದೆ. ಸತ್ಯ, ಧರ್ಮ, ನ್ಯಾಯ, ನೀತಿ, ಶಿಸ್ತು, ಸಮಯಪ್ರಜ್ಞೆಯ ಹಾದಿಯಲ್ಲಿ ಮುನ್ನಡೆದು ಉತ್ತಮ ಸುಶಿಕ್ಷಿತ ಸಮಾಜ ನಿರ್ಮಿಸಬೇಕು. ದೂರದೃಷ್ಟಿ, ಪ್ರಾಮಾಣಿಕತೆಯನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಸಂಕಲಾಪುರ ಮಠದ ಶ್ರೀ ಶಾಂತವೀರ ಮಲ್ಲಿಕಾರ್ಜುನ ಸ್ವಾಮಿಗಳು ಮಾತನಾಡಿ, ಗುರುವಿನ ಸ್ಥಾನವೇ ಅತ್ಯಂತ ಶ್ರೇಷ್ಠ ಹಾಗೂ ಪವಿತ್ರ ವಾದದ್ದು ಮತ್ತು ಹಿರಿಯದಾದದ್ದು. ಇದನ್ನರಿತು ಉತ್ತಮ ಸತ್ಪ್ರಜೆಗಳನ್ನು ರೂಪಿಸುವ ಜವಾಬ್ದಾರಿ ಎಲ್ಲಾ ಶಿಕ್ಷಕರ ಮೇಲಿದೆ ಎಂದರು.

ಸಾಹಿತಿ ಹಾಗೂ ಕ್ಷೇತ್ರ ಸಂಪನ್ಮೂಲ ವ್ಯಕ್ತಿ, ಪರಮೇಶ್ ಮಡಬಲು ಮಾತನಾಡಿ, ಶಿಕ್ಷಕರಾಗಿ ನಾವು ಕಲಿತು ಮಕ್ಕಳಿಗೆ ಕಲಿಸುವ ಸೌಭಾಗ್ಯ ನಮ್ಮದಾಗಿದೆ. ಇಂತಹ ಕಾಯಕ ನಮಗೆ ದೊರೆತದ್ದು ನಮ್ಮ ಸುಕೃತ ವೆಂದು ತಿಳಿಸಿದರು.

ಮುಖ್ಯ ಶಿಕ್ಷಕ ಹೆಚ್.ಜೆ.ಹರೀಶ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಲ್ಲಾ ಶಿಕ್ಷಕರಿಗೂ ಗುರುವಂದನೆ ಸಲ್ಲಿಸಲಾಯಿತು. ಸಮಾರಂಭದಲ್ಲಿ ಕಾರ್ಯದರ್ಶಿ ಕೆ.ಆರ್.ಕಾಂತರಾಜು, ಆನಂದ್, ದಿಲೀಪ್, ಹೆಚ್.ಡಿ. ವಸಂತ ಕುಮಾರಿ, ದಿನೇಶ್, ಪಲ್ಲವಿ, ವಿನುತ, ಸಹನ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ರಾಜ್ಯಮಟ್ಟಕ್ಕೆ ಆಯ್ಕೆ



**ಅರೇಹಳ್ಳಿ:** ಹಾಸನದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ 17 ವರ್ಷದೊಳಗಿನ ವಿದ್ಯಾರ್ಥಿಗಳ ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಬೇಲೂರು ತಾಲೂಕು ಅರೇಹಳ್ಳಿಯ ಅಂಬೇಡ್ಕರ್ ನಗರದ ಅನುಗ್ರಹ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿ ಆದರ್ಶ್ ಗಮನಾರ್ಹ ಸಾಧನೆ ಮಾಡಿದ್ದಾರೆ. ಎತ್ತರ ಜಿಗಿತ ಸ್ಪರ್ಧೆಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ಆದರ್ಶ್ ದ್ವಿತೀಯ ಸ್ಥಾನ ಪಡೆದುಕೊಂಡು ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಯ ಈ ಸಾಧನೆಗೆ ಶಾಲೆಯ ವ್ಯವಸ್ಥಾಪಕರಾದ ಫಾ. ಕಿರಣ್ ಮೆಲ್ವಿನ್, ಮುಖ್ಯ ಶಿಕ್ಷಕರು ಹಾಗೂ ಇತರ ಶಿಕ್ಷಕರು ಅಭಿನಂದನೆ ಸಲ್ಲಿಸಿ, ರಾಜ್ಯಮಟ್ಟ ದಲ್ಲಿಯೂ ಉತ್ತಮ ಸಾಧನೆ ಮಾಡು ವಂತೆ ಶುಭ ಹಾರೈಸಿದ್ದಾರೆ.

### ಖಾಕಿ ಬದುಕಿನ ರೋಚಕ ಅನುಭವಗಳು ಕಾರ್ಯಕ್ರಮದಲ್ಲಿ ನಿವೃತ್ತ ಎಸಿಸಿ ಅಶೋಕ್‌ಕುಮಾರ್

# ಕೀಳರಿಮೆ ಬಿಟ್ಟು ಯಶಸ್ಸಿನತ್ತ ಹೆಜ್ಜೆ ಹಾಕಬೇಕು

• ಪ್ರಜೋದಯ ವರದಿ

**ಹಾಸನ:** ವಿದ್ಯಾರ್ಥಿಗಳು ಕೀಳರಿಮೆ ಬಿಟ್ಟು ತಮ್ಮ ಭವಿಷ್ಯದತ್ತ ಗಮನ ಹರಿಸಿ, ಪ್ರತಿದಿನ ಯಶಸ್ಸಿನ ಕಡೆಗೆ ಹೆಜ್ಜೆ ಇಡಬೇಕು ಎಂದು ನಿವೃತ್ತ ಎಸಿಪಿ ಬಿ.ಬಿ.ಅಶೋಕ್ ಕುಮಾರ್ ಹೇಳಿದರು.

ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ಹಾಸನ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಯುವ ರೆಡ್ ಕ್ರಾಸ್ ಘಟಕದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ''ಟೈಗರ್ ಅಶೋಕ್ ಕುಮಾರ್ ಅವರ ಖಾಕಿ ಬದುಕಿನ ರೋಚಕ ಅನುಭವಗಳು'' ಕಾರ್ಯಕ್ರಮದಲ್ಲಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಗುರಿ ಮತ್ತು ಗುರು ಹೊಂದಿರಬೇಕು. ಸರಿಯಾದ ಮಾರ್ಗದಲ್ಲಿ ನಡೆದು, ಪಂಚೇಂದ್ರಿಯಗಳನ್ನು ನಿಯಂತ್ರಣದಲ್ಲಿಟ್ಟುಕೊಡು ಶಿಸ್ತು ಮತ್ತು ಸಂಕಲ್ಪದಿದ ವಿದ್ಯಾಭ್ಯಾಸ ಮಾಡಬೇಕು. ಹಸಿವು ಮತ್ತು ಅವಮಾನಗಳನ್ನು ಯಶಸ್ಸಿನ ಮೆಟ್ಟಿಲುಗಳನ್ನಾಗಿ ಪರಿವರ್ತಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.




ಕಾರ್ಗಿಲ್ ಯುದ್ಧದಲ್ಲಿ ಅಪ್ರತಿಮ ಶೌರ್ಯ ಮೆರೆದ ಕ್ಯಾಪ್ಟನ್ ವಿಜಯ್ ಥಾಪರ್ ಅವರಂತಹ ವೀರ ಸೈನಿಕರು ವಿದ್ಯಾರ್ಥಿಗಳ ನಿಜವಾದ ಹೀರೋಗಳಾಗಬೇಕು. ದೇಶಕ್ಕಾಗಿ ತ್ಯಾಗ ಮಾಡಿದ ಸೈನಿಕರು, ಅನ್ನ ನೀಡುವ ರೈತರು, ಜ್ಞಾನ ನೀಡುವ ಗುರುಗಳು ಹಾಗೂ ತಮ್ಮ ಬದುಕನ್ನು ಮುಡಿಪಾಗಿಟ್ಟ ತಂದೆ-ತಾಯಿಯೇ ಜೀವನದ ನಿಜವಾದ ಹೀರೋಗಳು. ವಿದ್ಯಾರ್ಥಿಗಳು ಇಂತಹ ಮಹನೀಯರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳು ಸಿಗರೇಟ್, ಮದ್ಯಪಾನ ಸೇರಿದಂತೆ ಎಲ್ಲ ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸಬೇಕು. ಅಹಂಕಾರ ಮತ್ತು ಸೋಮಾರಿತನವನ್ನೂ ದುಶ್ಚಟಗಳೆಂದು ಪರಿಗಣಿಸಿ ಅವುಗಳಿಂದ ದೂರವಿರಬೇಕು. ಸಮಾಜದಲ್ಲಿ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸುವ ವೈದ್ಯರು, ಪೊಲೀಸ್ ಅಧಿಕಾರಿಗಳು ಹಾಗೂ ವಕೀಲರೊಂದಿಗೆ ಉತ್ತಮ ಸಂಪರ್ಕ ಹೊಂದಿ, ಸಮಸ್ಯೆಗಳು ಎದುರಾದಾಗ ಕಾನೂನುಬದ್ಧವಾಗಿ ಪರಿಹಾರ ಕಂಡುಕೊಳ್ಳಬೇಕು ಎಂದು ಸಲಹೆ ನೀಡಿದರು.

ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ಅವಧಿಯ ರೋಚಕ ಅನುಭವಗಳನ್ನು ಹಂಚಿಕೊಂಡ ಅವರು, ''ಆಪರೇಷನ್ ಟೈಗರ್'' ಸಂದರ್ಭದಲ್ಲಿ ಸರಗಳ್ಳರನ್ನು ಬೈಕ್‌ನಲ್ಲಿ ಬೆನ್ನಟ್ಟಿ ಹಿಡಿಯುವ ವೇಳೆ ಕೈಗೆ ಚಾಕುವಿನಿಂದ ಇರಿತವಾದರೂ ಕರ್ತವ್ಯದಿಂದ ಹಿಂದೆ ಸರಿಯದೆ ಆರೋಪಿಗಳನ್ನು ಬಂಧಿಸಿದ ಘಟನೆಯನ್ನು ವಿವರಿಸಿದರು. ಈ ಘಟನೆಯ ನಂತರ ತಮಗೆ ''ಟೈಗರ್ ಅಶೋಕ್'' ಎಂಬ ಹೆಸರು ಪ್ರಸಿದ್ಧಿಯಾಯಿತು ಎಂದು ತಿಳಿಸಿದರು. ಕುಖ್ಯಾತ ಕಾಡುಗಳ್ಳ ವೀರಪ್ಪನ್‌ನನ್ನು ಹಿಡಿಯುವ ಕಾರ್ಯಾಚರಣೆಯಲ್ಲಿಯೂ ಹಲವು ಕಷ್ಟಕರ ಅನುಭವಗಳನ್ನು ಎದುರಿಸಿದ್ದಾಗಿ ಹೇಳಿದರು.

ಜನತಾ ಮಾಧ್ಯಮ ಪತ್ರಿಕೆಯ ಸಂಪಾದಕ ಮಂಜುನಾಥ ದತ್ತ ಅವರು, ಅಶೋಕ್ ಕುಮಾರ್ ತಮ್ಮ ಬಾಲ್ಯದ ಸ್ನೇಹಿತರಾಗಿದ್ದು, ಬಾಲ್ಯದಿಂದಲೇ ಗಟ್ಟಿ ನಿಲುವು ಹಾಗೂ ಧೈರ್ಯ ಹೊಂದಿದ್ದವರು. ಅವರು ದಕ್ಷ ಮತ್ತು ಪ್ರಾಮಾಣಿಕ ಅಧಿಕಾರಿಯಾಗಿ ಸಾಧನೆ ಮಾಡಿರುವುದು ಹಾಸನ ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು.

ಡಾ. ತೇಜಸ್ವಿ, ಹೆಮ್ಮಿಗೆ ಮೋಹನ್, ಡಾ.ಗಿರೀಶ್, ಅಮ್ಜದ್‌ಖಾನ್, ಮಮತಾ ಪಾಟೀಲ್, ಶಬ್ಬೀರ್ ಅಹ್ಮದ್, ಜಯೇಂದ್ರ ಕುಮಾರ್ ಇನ್ನಿತರರು ಉಪಸ್ಥಿತರಿದ್ದರು.



ಹಾಸನ ತಾಲ್ಲೂಕು ಸಂತೆಕೊಪ್ಪಲು ಸರ್ಕಾರಿ ಪ್ರೌಢಶಾಲೆಯ 17ರ ವಯೋಮಿತಿಯ ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಬಾಲಕರ ವಿಭಾಗದ ಬಾಲ್ ಬ್ಯಾಡ್ಮಿಂಟನ್ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದು ವಿಭಾಗ ಮಟ್ಟಕ್ಕೆ ಐದು ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ. ಇವರಿಗೆ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ಸಹಶಿಕ್ಷಕರು ಅಭಿನಂದನೆಗಳನ್ನು ಸಲ್ಲಿಸಿ ಶುಭ ಹಾರೈಸಿದ್ದಾರೆ.

## ಶಾಲಾ ಶಿಕ್ಷಕರ ಕೇಂದ್ರ ಸಂಘದ ಉಪಾಧ್ಯಕ್ಷ



ಆಲೂರು: ಆಲೂರು ತಾಲ್ಲೂಕು ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಡಿ.ಎಂ.ವರದರಾಜು ರವರನ್ನು, ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಕೇಂದ್ರ ಸಂಘದ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ ಎಂದು ರಾಜ್ಯಾಧ್ಯಕ್ಷ ಚಂದ್ರಶೇಖರ ನುಗ್ಗಲಿ ಹಾಗು ಕಾರ್ಯದರ್ಶಿ ಎಚ್.ಎಸ್.ಚೇತನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವರ್ಣ ರೂಪಿಣಿಯಾಗಿ ಕಂಗೊಳಿಸಿದ ಮಾಡಾಳು ಶ್ರೀ ಗೌರಮ್ಮ ದೇವಿ



• ಪ್ರಜೋದಯ ವರದಿ

**ಅರಸೀಕೆರೆ:** ತಾಲ್ಲೂಕಿನ ಪುಣ್ಯಕ್ಷೇತ್ರ ಶ್ರೀ ಕ್ಷೇತ್ರ ಮಾಡಾಳು ಗ್ರಾಮದಲ್ಲಿ ನೆಲೆಸಿರುವ ಮೂಲ ಸನ್ನಿಧಿ ಮುಗುತಿ ಸುಂದರಿ ಮೂಲ ಸ್ವರ್ಣಗೌರಿ ದೇವಿಯು ಸ್ವರ್ಣ ರೂಪಿಣಿಯಾಗಿ ಕಂಗೊಳಿಸಿ, ಮೂಲ ಸನ್ನಿಧಿಯಲ್ಲಿ ವಿರಾಜಮಾನವಾಗಿ ತನ್ನ ದಿವ್ಯ ದರ್ಶನದಿಂದಲೇ ಭಕ್ತರನ್ನು ಪಾವನಗೊಳಿಸುತ್ತಿದ್ದಾಳೆ.

ಕಳೆದ 167 ವರ್ಷಗಳ ಇತಿಹಾಸ ಹೊಂದಿರುವ ಈ ಮೂಲ ಗೌರಮ್ಮ ದೇವಿ ಸನ್ನಿಧಾನವನ್ನು ನೋಡಲು ನಾಡಿನಾದ್ಯಂತ ಲಕ್ಷಾಂತರ ಭಕ್ತ ಸಮೂಹ ಆಗಮಿಸಿ, ಗೌರಮ್ಮನವರನ್ನು ನೋಡಿ, ಅರ್ಚಿಸಿ, ಪೂಜಿಸಿ, ಧ್ಯಾನಿಸಿ ಪಾವನರಾಗುತ್ತಿದ್ದಾರೆ.

**ಸಚಿವರ ಪತ್ನಿ ಭೇಟಿ:**

ಅಬಕಾರಿ ಸಚಿವ ಕೆ.ಎಂ.ಶಿವಲಿಂಗೇಗೌಡರ ಪತ್ನಿ ಪುಷ್ಪಾವತಿಯವರು ದೇವಾಲಯಕ್ಕೆ ಭೇಟಿ ನೀಡಿ, ಅಮ್ಮನವರಿಗೆ ಸೀರೆ ಮತ್ತು ಬಾಗಿನ ಅರ್ಪಿಸಿ ವಿಶೇಷ ಪೂಜೆ ಸಲ್ಲಿಸಿದರು. ಪುಷ್ಪಾವತಿಯವರು ಸಹ ಸರತಿ ಸಾಲಿನಲ್ಲಿ ಬಂದು ಅಮ್ಮನವರಿಗೆ ಪೂಜೆ ಸಲ್ಲಿಸಿದ್ದು ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಬಿ. ಶಶಿಧರ್, ಉದ್ಯಮಿ ಕೆ.ವಿ. ನಿರ್ವಾಣಸ್ವಾಮಿ, ಅರ್ಬನ್ ಬ್ಯಾಂಕ್ ನಿರ್ದೇಶಕರು, ತಾಲ್ಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಆನಂದ್, ನಿರ್ದೇಶಕ ಟಿ.ಎಂ. ಜಗದೀಶ್ ಇನ್ನಿತರರು ಪಾಲ್ಗೊಂಡಿದ್ದರು.

# ಭಕ್ತರ ಇಷ್ಟಾರ್ಥ ನೆರವೇರಿಸುವ ಜೇನುಕಲ್ಲು ಸಿದ್ದರ ಕ್ಷೇತ್ರ

## ಹಾರನಹಳ್ಳಿ ಗ್ರಾಮಸ್ಥರಿಂದ ಹುಣ್ಣಿಮೆ ಕಾರ್ಯಕ್ರಮ

ಹಾರನಹಳ್ಳಿ: ಇಲ್ಲಿಗೆ ಸಮೀಪದ ಯಾದಾಪುರವು ಅರಸೀಕೆರೆ ತಾಲ್ಲೂಕಿನ ಪವಿತ್ರ ಸಿದ್ದರ ಕ್ಷೇತ್ರ ಯಾದಪುರ ಗ್ರಾಮದಲ್ಲಿರುವ ಜೇನುಕಲ್ಲು ಸಿದ್ದೇಶ್ವರ ಸ್ವಾಮಿ ದೇವಸ್ಥಾನವು ನಾಡಿನ ಪ್ರಸಿದ್ಧ ಶೈವ ಕ್ಷೇತ್ರಗಳಲ್ಲಿ ಒಂದಾಗಿದೆ. ಇದನ್ನೇ ಗುರು ಜೇನು ಕಲ್ಲು ಸಿದ್ದೇಶ್ವರ ಸ್ವಾಮಿ ಎಂದೂ ಕರೆಯುತ್ತಾರೆ.

**ಕ್ಷೇತ್ರದ ವೈಶಿಷ್ಟ್ಯ:**

ಅರಸೀಕೆರೆಯಿಂದ ಕೇವಲ 8 ಕಿ.ಮೀ ದೂರದಲ್ಲಿರುವ ಈ ಕ್ಷೇತ್ರವು ಬೆಟ್ಟದ ಮೇಲಿದೆ. ಬೆಟ್ಟ ಹತ್ತಲು 1101 ಮೆಟ್ಟಿಲುಗಳಿವೆ. ಬೆಟ್ಟದ ತುದಿಯಲ್ಲಿ ಸ್ವಾಮಿಯ ದಿವ್ಯ ಪಾದದ ದರ್ಶನ ಅದೆ ಸಿದ್ದರ ಪವಿತ್ರ ಪಾದ ಅಲ್ಲೇ ಪಕ್ಕದಲ್ಲಿ ಪವಿತ್ರ ಗಂಗಮ್ಮ ಕೊಳವಿದೆ. ಬೆಟ್ಟದ ಕೆಳಗೆ ಮುದ್ದು ನಂದಿಯ ರೂಪದಲ್ಲಿ ಬಸವಣ್ಣನ ದೇವಾಲಯವಿದೆ.

ಭಕ್ತರು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಪಾದದ ಮೇಲೆ ಹೂ ಪ್ರಸಾದ ಕೇಳುವುದು ಇಲ್ಲಿನ ಪುರಾತನ ವಾಡಿಕೆ. ಹರಕೆ ಈಡೇರಿದ ಭಕ್ತರು ಇಲ್ಲಿ ಅನ್ನ ದಾಸೋಹ ನಡೆಸುತ್ತಾರೆ. ಇಲ್ಲಿ ಪ್ರತಿನಿತ್ಯವೂ ಅನ್ನ ದಾಸೋಹ ನಡೆಯುತ್ತದೆ.



**ಐತಿಹ್ಯ:** ಹಿಂದೆ ಈ ಪ್ರದೇಶ ದಟ್ಟ ಅರಣ್ಯವಾಗಿತ್ತು. ಸಿದ್ಧ ಪುರುಷರು ಇಲ್ಲಿ ತಪಸ್ಸು ಮಾಡಿ ಸಿದ್ಧಿ ಪಡೆದ ಕಾರಣ ಈ ಸ್ಥಳಕ್ಕೆ ಸಿದ್ದೇಶ್ವರ ಎಂದು ಹೆಸರು ಬಂದಿದೆ ಎಂದು ಹೇಳಲಾಗುತ್ತದೆ. ಬೆಟ್ಟದಲ್ಲಿ ಯಾವಾಗಲು ಜೇನಗೂಡುಗಳಿವೆ ಶುದ್ದ ಮನಸಿ ನಿಂದ ಬೇಡಿದರೆ ಬೇಡಿದ ವರನ್ನು ನೀಡುವ ವರಗುರು ಕ್ಷೇತ್ರ 3 ಹುಣ್ಣಮೆ ಬೆಟ್ಟ ಹತ್ತಿ ದರ್ಶನ ಮಾಡಿದರೆ ಇಷ್ಟಾರ್ಥ ಸಿದ್ದಿಯಾಗುತ್ತದೆ.ಒಮ್ಮೆ ಊರಿನಲ್ಲಿ ಹರಡಿದ್ದ ರೋಗವನ್ನು ನಿವಾರಿಸಲು ಸನ್ಯಾಸಿಯೊಬ್ಬರು ಸಿದ್ದೇಶ್ವರನನ್ನು ಕುರಿತು ತಪಸ್ಸು ಮಾಡಿ ವರ ಪಡೆದರು ಎಂಬ ದಂತಕಥೆಯಿದೆ.

**ಭಾದ್ರಪದ ಹುಣ್ಣಿಮೆ ಮಹೋತ್ಸವ:**

ಪ್ರತಿ ವರ್ಷದಂತೆ ಈ ವರ್ಷವೂ ಭಾದ್ರಪದ ಹುಣ್ಣಿಮೆ ಅಂಗವಾಗಿ ಸೆ.25ರ ಶುಕ್ರವಾರ ರಾತ್ರಿ 10 ಗಂಟೆಗೆ ಮುತ್ತಿನಪಲ್ಲಕ್ಕಿ ಉತ್ಸವ ಮತ್ತು ಸೆ.26 ರ ಶನಿವಾರ ಹಾರನಹಳ್ಳಿ ಗ್ರಾಮಸ್ಥರಿಂದ ಮಹಾ ದಾಸೋಹ ಮತ್ತು ವೈಭವದಿಂದ ನಡೆಯಲಿದೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಹಾರನಹಳ್ಳಿ ಗ್ರಾಮಸ್ಥರು ಮನವಿ ಮಾಡಿದ್ದಾರೆ. ಹಾರನಹಳ್ಳಿ ಗ್ರಾಮದಲ್ಲಿ ಗುರು ದಾಸೋಹಕ್ಕೆ ವಿವಿಧ ವಸ್ತುಗಳನ್ನು ಸಂಗ್ರಹಿಸಿ ದಾಸೋಹಕ್ಕೆ ಎಲ್ಲಾ ರೀತಿಯ ಸಿದ್ದತೆ ಮಾಡುತ್ತಿದ್ದಾರೆ.

# ಟ್ಯಾಂಕರ್ ಡಿಕ್ಕಿ: ಬೈಕ್ ಸವಾರ ಸಾವು

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಟ್ಯಾಂಕರ್ ಲಾರಿ ಹಾಗೂ ಬೈಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಬೈಕ್ ಸವಾರ ಮೃತಪಟ್ಟಿದ್ದು, ಹಿಂಬದಿ ಕುಳಿತಿದ್ದ ಮಹಿಳೆ ಗಾಯಗೊಂಡಿರುವ ಘಟನೆ ತಾಲೂಕಿನ ದಂಡಿಗನಹಳ್ಳಿ ಹೋಬಳಿಯ ರಾಷ್ಟ್ರೀಯ ಹೆದ್ದಾರಿ-75ರ ಊಪನಹಳ್ಳಿ ಗೇಟ್ ಸಮೀಪ ನಡೆದಿದೆ.

ಮೃತರನ್ನು ತಾಲೂಕಿನ ದಂಡಿಗನಹಳ್ಳಿ ಹೋಬಳಿಯ ಮುದ್ದನಹಳ್ಳಿ ಗ್ರಾಮದ ನಂಜೇಗೌಡ ಅವರ ಪುತ್ರ ಎಂ.ಎನ್. ಉಮೇಶ (32) ಎಂದು ಗುರುತಿಸಲಾಗಿದೆ. ಗಾಯಗೊಂಡವರು ಉಮೇಶ್ ಅವರ ಪತ್ನಿ ರಚನಾ ಡಿ. ಎಂದು ತಿಳಿದುಬಂದಿದೆ.

ಉಮೇಶ್ ಹಾಗೂ ರಚನಾ ಅವರು -13--8323 ನೋಂದಣಿ ಸಂಖ್ಯೆಯ ಬಜಾಜ್ ಪಲ್ಸರ್ ಬೈಕ್‌ನಲ್ಲಿ ಮುದ್ದನಹಳ್ಳಿ ಗ್ರಾಮದಿಂದ ಚನ್ನರಾಯಪಟ್ಟಣಕ್ಕೆ ಕೆಲಸಕ್ಕೆ ತೆರಳುತ್ತಿದ್ದರು. ಬೆಳಿಗ್ಗೆ ಸುಮಾರು 9.10ರ ವೇಳೆಗೆ ರಾಷ್ಟ್ರೀಯ ಹೆದ್ದಾರಿ-75ರ ಉದಯಪುರ ಮೇಲ್ಸೇತುವೆ ದಾಟಿ ಊಪನಹಳ್ಳಿ ಗೇಟ್ ಸಮೀಪ ಬೈಕ್‌ನ ಎಡಪಥದಲ್ಲಿ ಸಂಚರಿಸುತ್ತಿದ್ದಾಗ, ಬಲಪಥದಲ್ಲಿ ತೆರಳುತ್ತಿದ್ದ -11-3946 ನೋಂದಣಿ ಸಂಖ್ಯೆಯ ಅಶೋಕ್ ಲೇಲ್ಯಾಂಡ್ ಟ್ಯಾಂಕರ್ ಲಾರಿಯನ್ನು ಅದರ ಚಾಲಕ ಯಾವುದೇ ಮುನ್ನೆಚ್ಚರಿಕೆ ನೀಡದೆ ಏಕಾಏಕಿ ಎಡಪಥಕ್ಕೆ ಚಲಾಯಿಸಿದ್ದಾನೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಈ ವೇಳೆ ಹಿಂಬದಿಯಿಂದ ಬರುತ್ತಿದ್ದ ಬೈಕ್‌ಗೆ ಟ್ಯಾಂಕರ್ ಡಿಕ್ಕಿ ಹೊಡೆದ ಪರಿಣಾಮ ಉಮೇಶ್ ಹಾಗೂ ರಚನಾ ಬೈಕ್ ಸಮೇತ ರಸ್ತೆಗೆ ಬಿದ್ದಿದ್ದಾರೆ. ಉಮೇಶ್ ಅವರ ತಲೆಗೆ ಗಂಭೀರ ಗಾಯವಾಗಿ ರಕ್ತಸ್ರಾವವಾಗಿದ್ದು ಸ್ಥಳದಲ್ಲಿ ಮೃದುಪಟ್ಟಿದ್ದಾರೆ.


**CHANGE OF NAME**

I, **SHAHEEN TAJ**, residing in Kushalnagar, Sakaleshpura, Hassan, hereby notify that clerical errors in my Passport (No. L7565188) have been corrected to state my correct name as **SHAHEEN TAJ** (instead of **SHAHIN TAJ**), date of birth as **01-01-1965** (instead of **16-04-1965**), and father's name as **ABDUL JALEEL** (instead of **GULAM ABDUL JALEEL**), per an affidavit affirmed by Notary Public P.Nanjappa on 22.09.2026.



ಕಾವೇರಿ ನೀರಾವರಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ, ಕಾನೀನಿನಿ,
ನಂ.1 ಹೇಮಾವತಿ ಎಡದಂಡೆ ನಾಲಾ ವಿಭಾಗ,
ಚನ್ನರಾಯಪಟ್ಟಣ, ದೂರವಾಣಿ: 08176–252204
E-Mail : eehlbcrp@gmail.com ph: 08176-256650

**ಅಲ್ಪಾವಧಿ ಟೆಂಡರ್ ಪ್ರಕಟಣೆ –07/2026–27 ದಿನಾಂಕ :19.09.2026 (ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಮಾತ್ರ)**
**Two cover System (QCBS tender)**

ವ್ಯವಸ್ಥಾಪಕ ನಿರ್ದೇಶಕರು, ಕಾನೀನಿನಿ, ಬೆಂಗಳೂರು ಇವರ ಪರವಾಗಿ ಕೆಳಗೆ ಸಹಿ ಮಾಡಿರುವವರಿಂದ ಕರ್ನಾಟಕ ಸರ್ಕಾರದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಲ್ಲಿ ಈ ಕೆಳಗೆ ಕಾಣಿಸಿದ ಕಾಮಗಾರಿಗಳಿಗೆ ಕೆಪಿಡಬ್ಲ್ಯುಡಿ/ಸಿಪಿಡಬ್ಲ್ಯೂಡಿ ಹಾಗೂ ಇತರೆ ಸಾರ್ವಜನಿಕ ವಲಯದ ಸಂಸ್ಥೆಗಳ ಅರ್ಹಗುತ್ತಿಗೆದಾರರುಗಳಿಂದ ಟೆಂಡರ್‌ಗಳನ್ನು ಅಹ್ವಾನಿಸಲಾಗಿದೆ. ಕಾಮಗಾರಿಗಳ ಸಂಖ್ಯೆ: 11 ಕಾಮಗಾರಿಗಳು. ಕಾಮಗಾರಿಗಳ ವಿವರ ಹೇಮಾವತಿ ನಾಲಾ ವೃತ್ತ ಕಛೇರಿ, ವಿಭಾಗ ಕಛೇರಿ, ಚನ್ನರಾಯಪಟ್ಟಣ, ಬಾಗೂರು & ಶ್ರವಣಬೆಳಗೊಳ ಉಪ ವಿಭಾಗ, ಕಛೇರಿಗಳು, ಹಾಗೂ ಹೇಮಾವತಿ ಕಾಲೋನಿಗಳು, ಪಾರ್ಕ ಹಾಗೂ ನಾಲಾ ನಿರ್ವಹಣಾ ಕಾಮಗಾರಿಗಳಿಗೆ ಮಾನವ ಸಂಪನ್ಮೂಲ ಒದಗಿಸುವ ಕಾಮಗಾರಿಗಳು ಟೆಂಡರ್‌ಗಿಟ್ಟ ಕಾಮಗಾರಿಗಳ ಮೊತ್ತ ರೂ. 5.87 ರಿಂದ ರೂ. 41.79 ಲಕ್ಷಗಳು. ಇ.ಎಂ.ಡಿ. ಮೊತ್ತ ರೂ.14700/– ರಿಂದ ರೂ. 83600/– ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಿಂದ ಟೆಂಡರ್ ದಾಖಲೆಗಳನ್ನು ದಿನಾಂಕ:21.09.2026 ರಿಂದ ಡೌನ್‌ಲೋಡ್ ಮಾಡಿಕೊಂಡು ಟೆಂಡರ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ:29.09.2026 ರ 16.00 ಘಂಟೆಯವರೆಗೆ, ಸ್ವೀಕೃತ ಟೆಂಡರ್‌ಗಳ ತಾಂತ್ರಿಕ ಬಿಡ್ ತೆರೆಯುವ ದಿನಾಂಕ:30.09.2026 ರಂದು 17.00 ಗಂಟೆಗಳು, ಅರ್ಹತೆ ಪಡೆದ ಗುತ್ತಿಗೆದಾರರ ತಾಂತ್ರಿಕ ಬಿಡ್‌ಗೆ ಅನುಮೋದನೆ ದೊರೆತ ನಂತರ ಆರ್ಥಿಕ ಬಿಡ್‌ನ್ನು ತೆರೆಯಲಾಗುವುದು. ಮೇಲ್ಕಂಡ ಕಾಮಗಾರಿಯ ಮುಂದೆ ನಮೂದಿಸಿರುವ ಟೆಂಡರ್‌ಗಿಟ್ಟ ಅಂದಾಜುಮೊತ್ತ ಹಾಗೂ ಇ.ಎಂ.ಡಿ.ಯಲ್ಲಿ ಯಾವುದೇ ಬದಲಾವಣೆ ಇದ್ದಲ್ಲಿ ಟೆಂಡರ್ ದಾಖಲೆಯಲ್ಲಿ ನಮೂದಿಸಿದ ಟೆಂಡರ್‌ಗಿಟ್ಟ ಮೊತ್ತ ಮತ್ತು ಇ.ಎಂ.ಡಿ. ಮೊತ್ತವು ಅಂತಿಮವಾಗಿರುತ್ತದೆ ಮತ್ತು ಪ್ರಚಲಿತದಲ್ಲಿರುವ ತೆರಿಗೆಗಳು ಅನ್ವಯವಾಗುತ್ತದೆ. ಸೂಚನೆ: ಹೆಚ್ಚಿನ ವಿವರ/ಮಾಹಿತಿಗಳನ್ನು(https://kppp.karnataka.gov.in) ವೆಬ್‌ಸೈಟ್‌ನಲ್ಲಿ ಹಾಗೂ ಕಛೇರಿಯಲ್ಲಿ ಪಡೆಯ ಬಹುದಾಗಿದೆ.

ಸಹಿ/– ಕಾರ್ಯಪಾಲಕ ಇಂಜಿನಿಯರ್, ನಂ.1,
ಹೇಮಾವತಿ ಎಡದಂಡೆ ನಾಲಾ ವಿಭಾಗ, ಕಾನೀನಿ(ನಿ),
ಚನ್ನರಾಯಪಟ್ಟಣ

ವಾಸಾಸಂಇ/ಹಿಸನಿ/ಹಾಸನ/539/ಕೆಎಸ್‌ಎಂಸಿಎ/2026–27


## ಹಾನಿಗೊಳಗಾದ ಪೈಪ್‌ಲೈನ್: ಕುಡಿಯುವ ನೀರು ಪೋಲು

ಅರೇಹಳ್ಳಿ: ಪ್ರಸಕ್ತ ವರ್ಷ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ಬರದ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನಲೆ ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೂ ಸಮಸ್ಯೆ ಎದುರಾಗುವ ಆತಂಕವಿದೆ. ಇಂತಹ ಸಂದರ್ಭದಲ್ಲಿ ಪಟ್ಟಣದಲ್ಲಿ ಹಲವು ದಿನಗಳಿಂದ ಹಾನಿಗೊಳಗಾಗಿರುವ ಮುಖ್ಯ ಪೈಪ್ ಲೈನ್‌ನಿಂದ ಪ್ರತಿದಿನ ಅಪಾರ ಪ್ರಮಾಣದ ಕುಡಿಯುವ ನೀರು ವ್ಯರ್ಥವಾಗಿ ಹರಿದುಹೋಗುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ದುರಸ್ತಿಗೆ ಮುಂದಾಗಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಬೇಲೂರು ತಾಲ್ಲೂಕಿನ ಅರೇಹಳ್ಳಿ ಪಟ್ಟಣದ ಇಂದಿರಾನಗರ ರಸ್ತೆಯ ಸಂತೆ ಮೈದಾನದ ಸಮೀಪ ಪಟ್ಟಣದ ವಿವಿಧ ಬಡಾವಣೆಗಳಿಗೆ ಕುಡಿಯುವ ನೀರು ಪೂರೈಸುವ ಮುಖ್ಯ ಪೈಪ್ ಲೈನ್ ಹಾನಿಗೊಳಗಾಗಿದೆ. ನೀರು ಸರಬರಾಜು ಮಾಡುವ ಸಂದರ್ಭದಲ್ಲಿ ಪೈಪ್‌ನಿಂದ ನೀರು ಸೋರಿಕೆಯಾಗುತ್ತಿದ್ದು, ಪ್ರತಿದಿನ ನೀರು ರಸ್ತೆಯಲ್ಲಿ ಹರಿದು ವ್ಯರ್ಥವಾಗುತ್ತಿದೆ.

ಮಳೆಯ ಕೊರತೆಯಿಂದ ಈಗಾಗಲೇ ನೀರಿನ ಲಭ್ಯತೆ ಕುರಿತು ಆತಂಕ ಎದುರಾಗಿರುವ ಸಂದರ್ಭದಲ್ಲಿ ಕುಡಿಯುವ ನೀರು ಹೀಗೆ ಪೋಲಾಗುತ್ತಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ಮುಂದಿನ ದಿನಗಳಲ್ಲಿ ನೀರಿನ ಸಮಸ್ಯೆ ತೀವ್ರಗೊಳ್ಳುವ ಸಾಧ್ಯತೆ ಇರುವುದರಿಂದ, ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಹಾನಿಗೊಳಗಾದ ಪೈಪ್‌ಲೈನ್‌ನ್ನು ದುರಸ್ತಿಪಡಿಸಬೇಕು. ಆ ಮೂಲಕ ಅಮೂಲ್ಯ ಕುಡಿಯುವ ನೀರು ವ್ಯರ್ಥವಾಗುವುದನ್ನು ತಡೆಯಬೇಕು ಎಂದುನಿವಾಸಿಗಳು ಒತ್ತಾಯಿಸಿದ್ದಾರೆ.



## ರಾಜ್ಯಮಟ್ಟಕ್ಕೆ ಆಯ್ಕೆ: ಅಭಿನಂದನೆ



**ಅರಕಲಗೂಡು:** ಕ್ರೀಡೆಯು ವ್ಯಕ್ತಿಯಲ್ಲಿ ಸ್ಪರ್ಧಾ ಸ್ಪೂರ್ತಿಯನ್ನು ಹೆಚ್ಚಿಸುವುದರ ಜೊತೆಗೆ ದೈಹಿಕ ಹಾಗೂ ಭಾವನಾತ್ಮಕ ವಲಯವನ್ನು ಉಲ್ಲಾಸಿತಗೊಳಿಸುತ್ತದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಪಿ.ನಾರಾಯಣ ಹೇಳಿದರು.

ಪಟ್ಟಣದ ಕೋಟೆ ಸರ್ಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾಮಟ್ಟದ ಕ್ರೀಡಾಕೂಟದ ವೈಯಕ್ತಿಕ ವಿಭಾಗದ ಟ್ರಿಪಲ್ ಜಂಪ್ ಸ್ಪರ್ಧೆಯಲ್ಲಿ ಭಾಗವಹಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವ ಕ್ರೀಡಾಪಟುಗಳ ಅಭಿನಂದನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕ್ರೀಡೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವುದರಿಂದ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಶಿಸ್ತು ಹಾಗೂ ಸ್ಪರ್ಧಾ ಮನೋಭಾವ ಬೆಳೆಸಿಕೊಳ್ಳಲು ಸಹಕಾರಿಯಾಗುತ್ತದೆ. ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡುವ ಮೂಲಕ ವಿದ್ಯಾರ್ಥಿಗಳು ತಮ್ಮ ಶಾಲೆ, ತಾಲೂಕು ಹಾಗೂ ಜಿಲ್ಲೆಗೆ ಕೀರ್ತಿ ತರುವುದರ ಜೊತೆಗೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು ಎಂದು ಅವರು ಹೇಳಿದರು.

ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ಮಾಡಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವ ಕ್ರೀಡಾಪಟುಗಳಾದ ನವ್ಯ, ಶೆಮಿಕ, ಪ್ರತೀಕ್ಷಾ ಹಾಗೂ ಸೋನಾ ಅವರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಿ ಅಭಿನಂದಿಸಲಾಯಿತು. ಕ್ರೀಡಾಪಟುಗಳಿಗೆ ಮಾರ್ಗದರ್ಶನ ನೀಡಿದ ದೈಹಿಕ ಶಿಕ್ಷಣ ಶಿಕ್ಷಕಿ ಸುಜಾತ ಅವರನ್ನು ಸಹ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲಾ ಮುಖ್ಯ ಶಿಕ್ಷಕ ಸಿ.ಎ.ರಂಗಸ್ವಾಮಿ, ಬಸವರಾಜ್ ಎಂ.ಎ., ಪಿ.ಬಿ. ವಿರೂಪಾಕ್ಷ, ಚಿತ್ರಾ, ಪ್ರಸನ್ನ ಕುಮಾರ್ ಸೇರಿದಂತೆ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

